# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 183 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 03–02–2024 ಶನಿವಾರ | ಪುಟ: 4 | ಬೆಲೆ : ರೂ.2–00
Volume - 01 Issue - 183 | Title- Code: KARKAN 28269 | Chitradurga | Date: 03-02-2024 Saturday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಸಾಹಿತ್ಯ ಜಾತ್ರೆಯಲ್ಲಿ ಕುಣಿದು ಕುಪ್ಪಳಿಸಿದ ಸಾಹಿತ್ಯಾಭಿಮಾನಿಗಳು 2

ಟ್ರ್ಯಾಕ್ಟರ್‌ಗೆ ಡಿಕ್ಕಿ ಹೊಡೆದ ಮದುವೆ ದಿಬ್ಬಣದ ಬಸ್: 30ಕ್ಕೂ ಹೆಚ್ಚು ಜನರಿಗೆ ಗಾಯ 3

ಸರ್ಕಾರದ ಗ್ಯಾರಂಟಿ ಯೋಜನೆಗಳು ಜನಪರವಾಗಿವೆ: ಟಿ. ರಘುಮೂರ್ತಿ 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಫಾಸ್ಟ್ ನ್ಯೂಸ್

### ಜಮೀನು ದಾಖಲೆಗೆ ನೀಡಲು 15 ಸಾವಿರ ಲಂಚ ಕೇಳಿದ ಗಂಗಯ್ಯ, ಚಾಲಕ ವಿರುದ್ಧ ತನಿಖೆ

» **ಚಳ್ಳಕೆರೆ**

ತಾಲ್ಲೂಕಿನ ತಳಕು ಹೋಬಳಿಯ ಓಬಳಾಪುರ ಗ್ರಾಮದ ಕೆ.ಜಿ.ಜಯಣ್ಣ ಮತ್ತು ಸಹೋದರರು ತಮ್ಮ ಜಮೀನಿನ ಪಹಣ ಮತ್ತು ಇತರೆ ದಾಖಲಾತಿಗಳನ್ನು



ಸಿದ್ದಪಡಿಸಿಕೊಡುವಂತೆ ತಾಲ್ಲೂಕು ಭೂದಾಖಲೆಗಳ ಸಹಾಯಕ ನಿರ್ದೇಶಕ ಗಂಗಯ್ಯ ಹದಿನೈದು ಸಾವಿರ ಲಂಚ ಕೇಳಿದ್ದು, ಆಪೈಕಿ ಹತ್ತು ಸಾವಿರವನ್ನು ಕಾರಿನ ಚಾಲಕ ಕಿರಣ್ ಮೂಲಕ ಪಡೆಯುವ ಸಂದರ್ಭದಲ್ಲಿ ಲೋಕಾಯುಕ್ತ ದಾಳಿಗೆ ಒಳಗಾಗಿದ್ದಾರೆ. ಜಿಲ್ಲಾ ಲೋಕಾಯುಕ್ತ ಎಸ್ಪಿ ವಾಸುದೇವ್ ಮಾರ್ಗದರ್ಶನದಲ್ಲಿ ಡಿವೈಎಸ್ಪಿ ಮೃತ್ಯುಂಜಯ, ವೃತ್ತ ನಿರೀಕ್ಷಕ, ಪಿಎಸ್‌ಐ ಮತ್ತು ಸಿಬ್ಬಂದಿ ವರ್ಗದೊಂದಿಗೆ ಶುಕ್ರವಾರ ಸಂಜೆ 6.30ರ ಸಮಯದಲ್ಲಿ ಕಚೇರಿ ಮುಂದೆಯೇ ದಾಳಿ ನಡೆಸಿದ್ದು, ಕೆ.ಜೆ.ಜಯಣ್ಣರಿಂದ ಹಣ ಪಡೆದ ಚಾಲಕ ಕಿರಣ್‌ನನ್ನು ಪ್ರಶ್ನಿಸಿದಾಗ ಅಧಿಕಾರಿ ಗಂಗಯ್ಯನವರ ಸೂಚನೆಯಂತೆ ಹಣ ಪಡೆದಿರುವುದಾಗಿ ಲೋಕಾಯುಕ್ತ ಅಧಿಕಾರಿಗಳಿಗೆ ತನಿಖಾ ಸಂದರ್ಭದಲ್ಲಿ ಸ್ಪಷ್ಟನೆ ನೀಡಿದ್ದಾನೆ. ಅಧಿಕಾರಿ ಗಂಗಯ್ಯ ಸುದ್ದಿತಿಳಿದ ಕೂಡಲೇ ಸ್ಥಳದಿಂದ ಪರಾರಿಯಾಗಿ ತಲೆಮರೆಸಿಕೊಂಡಿದ್ದು ಲೋಕಾಯುಕ್ತ ಅಧಿಕಾರಿಗಳು ಗಂಗಯ್ಯನನ್ನು ಹುಡುಕುವ ಪ್ರಯತ್ನ ಮುಂದುವರೆಸಿದ್ದಾರೆ. ಗಂಗಯ್ಯ ಮತ್ತು ಚಾಲಕ ಕಿರಣ್ ತನಿಖೆ ಮುಂದುವರೆದಿದೆ. ಕಳೆದ ಆಗಸ್ಟ್ 3ರಂದು ಇಲ್ಲಿನ ನಗರಸಭೆ ಪೌರಾಯುಕ್ತೆಯಾಗಿದ್ದ ಕೆ.ಲೀಲಾವತಿ, ಪ್ರಥಮ ದರ್ಜೆ ಸಹಾಯಕ ಕಾಂತರಾಜ್ ಮೂಲಕ ಮೂರು ಲಕ್ಷ ಹಣ ಪಡೆಯುವಾಗ ಸಿಕ್ಕಿ ಬಿದಿದ್ದರು. ಈ ಪ್ರಕರಣ ನಡೆದು ಐದು ತಿಂಗಳ ನಂತರ ಈಗ ಭೂದಾಖಲೆ ಇಲಾಖೆ ಕಚೇರಿಯಲ್ಲಿ ಲೋಕಾಯುಕ್ತದಾಳಿ ಪ್ರಕರಣ ನಡೆದಿದೆ.

### ಮುಖ್ಯಮಂತ್ರಿಗಳ ದಾವಣಗೆರೆ ಪ್ರವಾಸ

» **ದಾವಣಗೆರೆ**

ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ಫೆಬ್ರವರಿ 3 ರಂದು ಬೆಳಗ್ಗೆ 10.30 ಕ್ಕೆ ಹೆಲಿಕ್ಯಾಪ್ಟರ್ ಮೂಲಕ ದಾವಣಗೆರೆ ಎಂ.ಬಿ.ಎ ಮೈದಾನಕ್ಕೆ ಆಗಮಿಸುವರು. ಶಾಮನೂರು ಶಿವಶಂಕರಪ್ಪ ಪಾರ್ವತಮ್ಮ ಕಲ್ಯಾಣ ಮಂಟಪದಲ್ಲಿ ನಡೆಯುವ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ 38 ನೇ ರಾಜ್ಯ ಮಟ್ಟದ ಸಮ್ಮೇಳನದಲ್ಲಿ ಭಾಗವಹಿಸುವರು. ಮಧ್ಯಾಹ್ನ 3 ಗಂಟೆಗೆ ಹೊನ್ನಾಳಿ ತಾ; ಹೆಚ್.ಕಡದಕಟ್ಟೆ ಗ್ರಾಮದ ಹೆಲಿಪ್ಯಾಡ್‌ಗೆ ಆಗಮಿಸಿ ಹೊನ್ನಾಳಿಯಲ್ಲಿ ತಾಲ್ಲೂಕು ಕುರುಬರ ಸಂಘದಿಂದ ಆಯೋಜಿಸಿರುವ ಸಂಗೊಳ್ಳಿ ರಾಯಣ್ಣ ಪ್ರತಿಮೆಗೆ ಮಾಲಾರ್ಪಣೆ, ದಾಸಶ್ರೇಷ್ಟ ಶ್ರೀ ಭಕ್ತ ಕನಕದಾಸರ ಕಂಚಿನ ಪ್ರತಿಮೆಯ ಅನಾವರಣ ಕಾರ್ಯಕ್ರಮದಲ್ಲಿ ಭಾಗವಹಿಸಿ ಸಂ.4.30 ಕ್ಕೆ ಹೆಲಿಕ್ಯಾಪ್ಟರ್ ಮೂಲಕ ಬೆಂಗಳೂರಿಗೆ ಪ್ರಯಾಣಿಸುವರು.

### ವಿಧಾನ ಪರಿಷತ್ತಿನ ಸಭಾಪತಿಯವರ ಪ್ರವಾಸ

» **ದಾವಣಗೆರೆ**

ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿಗಳಾದ ಬಸವರಾಜ್.ಎಸ್.ಹೊರಟ್ಟಿಯವರು ಫೆಬ್ರವರಿ 4 ರಂದು ಮಧ್ಯಾಹ್ನ 2 ಗಂಟೆಗೆ ದಾವಣಗೆರೆ ಆಗಮಿಸುವರು. ಶಾಮನೂರು ಶಿವಶಂಕರಪ್ಪ ಪಾರ್ವತಮ್ಮ ಕಲ್ಯಾಣ ಮಂಟಪದಲ್ಲಿ ನಡೆಯುವ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ 38 ನೇ ರಾಜ್ಯ ಮಟ್ಟದ ಸಮ್ಮೇಳನದ ಸಮಾರೋಪ ಸಮಾರಂಭದಲ್ಲಿ ಭಾಗವಹಿಸುವರು.

### ಫಲ–ಪುಷ್ಪ ಪ್ರದರ್ಶನಕ್ಕೆ ಸಚಿವ ಡಿ.ಸುಧಾಕರ್ ಚಾಲನೆ

# ಕಣ್ಮನ ಸೆಳೆದ ಫಲ ಪುಷ್ಪ ಪ್ರದರ್ಶನ

» **ಚಿತ್ರದುರ್ಗ**

ಚಿತ್ರದುರ್ಗ ನಗರದ ಜಿಲ್ಲಾ ತೋಟಗಾರಿಕೆ ಕಚೇರಿ ಆವರಣದಲ್ಲಿ ಮೂರು ದಿನಗಳ ಕಾಲ ಆಯೋಜಿಸಿರುವ 31ನೇ ಫಲ–ಪುಷ್ಪ ಪ್ರದರ್ಶನಕ್ಕೆ ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ಅವರು ಶುಕ್ರವಾರ ಚಾಲನೆ ನೀಡಿದರು.

ಫಲ–ಪುಷ್ಪ ಪ್ರದರ್ಶನಕ್ಕೆ ಚಾಲನೆ ನೀಡಿ ಮಾತನಾಡಿದ ಸಚಿವ ಡಿ.ಸುಧಾಕರ್, ಜಿಲ್ಲೆಯ ರೈತರು ಹೆಚ್ಚು ಹೆಚ್ಚಾಗಿ ತೋಟಗಾರಿಕೆ ಬೆಳೆಗಳನ್ನು ಬೆಳೆಯುವ ಮೂಲಕ ಆರ್ಥಿಕ ಶಕ್ತಿಯನ್ನು ವೃದ್ಧಿಸಿಕೊಳ್ಳಬೇಕು ಎಂದು ರೈತರಿಗೆ ಸಲಹೆ ನೀಡಿದರು.

ಕೋಲಾರ ಜಿಲ್ಲೆಯಲ್ಲಿ ಅತಿ ಹೆಚ್ಚು ತರಕಾರಿ, ಫಲ–ಪುಷ್ಪ ಬೆಳೆಗಳನ್ನು ಬೆಳೆಯುವ ಮೂಲಕ ತೋಟಗಾರಿಕೆ ಬೆಳೆಗಳನ್ನು ಅವಲಂಬಿಸಿದ್ದಾರೆ. ಅದರಂತೆ ಚಿತ್ರದುರ್ಗ ಜಿಲ್ಲೆಯ ರೈತರು ಕೂಡ ತೋಟಗಾರಿಕೆ ಬೆಳೆಗಳನ್ನು ಬೆಳೆಯಲು ಮುಂದಾಗಬೇಕು.ತೋಟಗಾರಿಕೆಬೆಳೆಗಳಿಗೆ ಅವಶ್ಯಕ ಇರುವ ಸರ್ಕಾರದ ವತಿಯಿಂದ ಅಥವಾ ಸಾರ್ವಜನಿಕ ಸಹಭಾಗಿತ್ವದಲ್ಲಿ ಕೋಲ್ಡ್ ಸ್ಟೋರೇಜ್ ಘಟಕ ನಿರ್ಮಾಣಕ್ಕೆ ಕ್ರಮವಹಿಸಲಾಗುವುದು ಎಂದು ಸಚಿವರು ಭರವಸೆ ನೀಡಿದರು.

ಜಿಲ್ಲೆಯ ಆಸಕ್ತ ಹಾಗೂ ಪ್ರಗತಿಪರ ರೈತರನ್ನು ಫಲ–ಪುಷ್ಪ ಪ್ರದರ್ಶನ ವೀಕ್ಷಿಸಲು ಕ್ರಮಕೈಗೊಳ್ಳುವ ಮೂಲಕ ತೋಟಗಾರಿಕೆ ಬೆಳೆಗಳ ಕುರಿತು ಹೆಚ್ಚಿನ ಅರಿವು ಮೂಡಿಸುವ ಕೆಲಸ ತೋಟಗಾರಿಕೆ ಇಲಾಖೆ ಅಧಿಕಾರಿಗಳು ಮಾಡಬೇಕು ಎಂದು ಹೇಳಿದರು.

**ಪುಷ್ಪ ರಚಿಕರಿಗೆ ಮುದ ನೀಡಿದ ಫಲ–ಪುಷ್ಪ:** ಚಿತ್ರದುರ್ಗ ನಗರದ ಜಿಲ್ಲಾ ತೋಟಗಾರಿಕೆ ಕಚೇರಿ ಆವರಣದಲ್ಲಿ ಆಯೋಜಿಸಿರುವ ಫಲಪುಷ್ಪ ಪ್ರದರ್ಶನ ಜನರ ಕಣ್ಮನ ಸೆಳೆಯುತ್ತಿದೆ.

ಜಿಲ್ಲೆಯ ಕೃಷಿಗೆ ಅವಶ್ಯಕವಾಗಿರುವ ಮಳೆ ನೀರು ಕೊಯ್ಲು, ಜಿಲ್ಲೆಯ ರೈತರು ಹಾಗೂ ಸಾರ್ವಜನಿಕರಿಗೆ ತೋಟಗಾರಿಕೆ ಬೆಳೆಗಳ ವೈಜ್ಞಾನಿಕ ಮಾಹಿತಿ, ರೈತರ ಆದಾಯ ದ್ವಿಗುಣಗೊಳಿಸುವ ನಿಟ್ಟಿನಲ್ಲಿ ವೈಜ್ಞಾನಿಕವಾಗಿ ನೀರು ಬಳಕೆಯೊಂದಿಗೆ ವಿವಿಧ ತೋಟಗಾರಿಕೆ ಬೆಳೆಗಳ ಮಿಶ್ರ ಕೃಷಿ ಪದ್ಧತಿಯನ್ನು ಅಳವಡಿಕೆ ಕುರಿತು ಅರಿವು ಮೂಡಿಸುವ ನಿಟ್ಟಿನಲ್ಲಿ ಜಿಲ್ಲಾ ತೋಟಗಾರಿಕೆ ಇಲಾಖೆ, ಜಿಲ್ಲಾ ಪಂಚಾಯತ್, ಜಿಲ್ಲಾ ತೋಟಗಾರಿಕೆ ಸಂಘ ಹಾಗೂ ಕೃಷಿ ಇಲಾಖೆ ಸಂಯುಕ್ತಾಶ್ರಯದಲ್ಲಿ ಫಲ–ಪುಷ್ಪ ಪ್ರದರ್ಶನ ಹಮ್ಮಿಕೊಳ್ಳಲಾಗಿದೆ.

ಫಲ–ಪುಷ್ಪ ಪ್ರದರ್ಶನದ ಅಂಗವಾಗಿ ಸರ್ಕಾರದ ವಿವಿಧ ಯೋಜನೆಗಳು, ಕಾರ್ಯಕ್ರಮಗಳ, ವಿವಿಧ ಇಲಾಖೆಗಳು ಕಲ್ಪಿಸುವ ಸೌಲಭ್ಯಗಳು ವಿವರಗಳನ್ನು ಜನರಿಗೆ ತಿಳಿಸುವ ಉದ್ದೇಶದಿಂದ ಮಳಿಗೆಗಳನ್ನು ತೆರೆಯಲಾಗಿದೆ. ಜೊತೆಗೆ ಸ್ತ್ರೀಶಕ್ತಿ ಸಂಘಗಳ ಸ್ಥಳೀಯ ಉತ್ಪನ್ನಗಳ ಮಾರಾಟಕ್ಕೂ ಅವಕಾಶ ಕಲ್ಪಿಸಲಾಗಿದೆ.

ವಿವಿಧ ಹೂಗಳಿಂದ ಅಲಂಕರಿಸುವ ಭಾರತ ಸಂವಿಧಾನದ ಕಲಾಕೃತಿ, ಇತ್ತೀಚಿಗೆ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ ಇಸ್ರೋ ಅವರು ಚಂದ್ರಯಾನ–3 ಯಶ್ವಸಿಯಾಗಿ ಚಂದ್ರನ ದಕ್ಷಿಣ ಧ್ರುವದಲ್ಲಿ ಸಾಫ್ಟ್ ಲ್ಯಾಂಡಿಂಗ್ ಮಾಡಿದ್ದು, ಪ್ರಪಂಚದ ಮೊದಲನೇ ದೇಶವಾಗಿರುತ್ತದೆ. ಇದು ದೇಶದ ಹೆಮ್ಮೆಯ ವಿಷಯವಾಗಿದ್ದು, ಚಂದ್ರನ ಅಂಗಳದಲ್ಲಿ ಲ್ಯಾಂಡರ್ ವಿಕ್ರಮ್ ಹಾಗೂ ರೋವರ್ ಪ್ರಗ್ಯಾನ್ ಪ್ರತಿಕೃತಿ, ಐತಿಹಾಸಿಕ ಚಿತ್ರದುರ್ಗ ಕೋಟೆಯ ಗೋಪಾಲಸ್ವಾಮಿ ಹೊಂಡ, ಅಕ್ಕತಂಗಿ ಹೊಂಡ, ಸಿಹಿನೀರು ಹೊಂಡ ಹಾಗೂ ಸಂತೆ ಹೊಂಡಗಳು ಒಂದಕ್ಕೊಂದು ಸಂಪರ್ಕಿಸಿರುವ ಮಳೆ ನೀರು ಕೊಯ್ಲು ಘಟಕದ ಮಾದರಿಗಳ ಪ್ರದರ್ಶನ, ವಾಣಿವಿಲಾಸ (ಮಾರಿಕಣಿವೆ) ಅಣೆಕಟ್ಟು ಕಟ್ಟಿ ಜಿಲ್ಲೆಯ ಜನರ ದಾಹ ತಣಿಸಿದ, ರೈಲು ಮಾರ್ಗ, ರಸ್ತೆ ಮಾರ್ಗ ಕಲ್ಪಿಸಿದ ಮಹಾಚೇತನ ನಾಲ್ವಡಿ ಕೃಷ್ಣರಾಜ ಒಡೆಯರ ಪ್ರತಿಕೃತಿ, ವಿಶ್ರ ತೋಟಗಾರಿಕೆ ಕೃಷಿ ಮಾದರಿ, 12ನೇ ಶತಮಾನದಲ್ಲಿಯೇ ಸಮಸಮಾಜದ ಚಿಂತನೆಯಲ್ಲಿ ಅನುಭವ ಮಂಟಪ ಸ್ಥಾಪಿಸಿ ಸರ್ವಸಮಾನತೆಯ ಕನಸನ್ನು ಸರ್ವಕಾಲಿಕ ನನಸನ್ನಾಗಿಸಿದ ಧೀಮಂತ ಶಕ್ತಿ ಬಸವಣ್ಣನವರ ಕಲಾಕೃತಿ, ಇದರ ಜೊತೆಗೆ ಶ್ರೀ ಶಿವಕುಮಾರ ಸ್ವಾಮಿಜಿ, ಶ್ರೀ ಸಿದ್ದೇಶ್ವರ ಸ್ವಾಮೀಜಿ ಹಾಗೂ ಶ್ರೀ ಪುಟ್ಟರಾಜ ಗವಾಯಿಗಳ ಪ್ರತಿಕೃತಿಗಳು, ಚಿತ್ತಾಕರ್ಷಕ ವರ್ಣಗಳಿಂದ ಕೂಡಿದ ವಿವಿಧ ಪುಷ್ಪ ಸಸಿಗಳು, ತಳಿಗಳು ಫಲ–ಪುಷ್ಪ ಪ್ರದರ್ಶನದಲ್ಲಿ ಗಮನಸೆಳೆಯುತ್ತಿವೆ. ಈ ಸಂದರ್ಭದಲ್ಲಿ ಜಿಪಂ ಸಿಇಓ ಎಸ್.ಜೆ.ಸೋಮಶೇಖರ್, ಮುಖ್ಯ ಯೋಜನಾಧಿಕಾರಿ ಸತೀಶ್ ರೆಡ್ಡಿ, ಉಪ ವಿಭಾಗಾಧಿಕಾರಿ ಎಂ.ಕಾರ್ತೀಕ್, ತಹಶೀಲ್ದಾರ್ ಡಾ.ನಾಗವೇಣಿ, ತೋಟಗಾರಿಕೆ ಇಲಾಖೆ ಉಪನಿರ್ದೇಶಕಿ ಜಿ.ಸವಿತಾ, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕ ಹಾಗೂ ಜಿಲ್ಲಾ ತೋಟಗಾರಿಕೆ ಸಂಘದ ಪದನಿಮಿತ್ತ ಕಾರ್ಯದರ್ಶಿ ಬಿ.ದೇವರಾಜು, ಜಿಲ್ಲಾ ತೋಟಗಾರಿಕೆ ಸಂಘದ ಖಜಾಂಚಿ ನಾಗರಾಜ ಬೇದ್ರೆ, ಸಹಕಾರ್ಯದರ್ಶಿ ಗಿರೀಶ್ ಇದ್ದರು.









### ಜಿಲ್ಲೆಯ ಎಲ್ಲಾ ತಾಲೂಕಿಗೆ ಫಲ ಪುಷ್ಪ ಪರಿಚಯಿಸಿ: ಬಿ.ಜಿ.ಗೋವಿಂದಪ್ಪ

ಶಾಸಕ ಬಿ.ಜಿ.ಗೋವಿಂದಪ್ಪ ಮಾತನಾಡಿ, ಚಿತ್ರದುರ್ಗ ತಾಲ್ಲೂಕಿನಲ್ಲಿ ಹೆಚ್ಚಾಗಿ ಪುಷ್ಪ ಬೆಳೆ ಬೆಳೆಯುತ್ತಾರೆ. ಹಿರಿಯೂರು ತಾಲ್ಲೂಕಿನಲ್ಲಿ ಫಲ ಬೆಳೆಯುತ್ತಾರೆ. ಫಲ–ಪುಷ್ಪ ಜಿಲ್ಲೆಯ ಎಲ್ಲಾ ತಾಲ್ಲೂಕಿನ ರೈತರಿಗೂ ಪರಿಚಯಿಸುವ ಕೆಲಸವಾಗಬೇಕು ಎಂದು ತಿಳಿಸಿದ ಅವರು, ಜಿಲ್ಲೆಯ ಎಲ್ಲ ಆಸಕ್ತ ರೈತರು ಫಲ–ಪುಷ್ಪ ಪ್ರದರ್ಶನ ವೀಕ್ಷಣೆಗೆ ವ್ಯವಸ್ಥೆ ಮಾಡಿ, ಜಿಲ್ಲೆಯ ರೈತರು ಫಲ–ಪುಷ್ಪ ಬೆಳೆಯಲು ಪ್ರೋತ್ಸಾಹ ಮಾಡಬೇಕು ಎಂದರು.

### ಜಿಲ್ಲೆಗೆ ಕೋಲ್ಡ್ ಸ್ಟೋರೇಜ್ ಘಟಕ ಅಗತ್ಯ: ಕೆ.ಎಸ್.ನವೀನ್

ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್ ಮಾತನಾಡಿ, ಜಿಲ್ಲೆಯ ರೈತರಿಗೆ, ಸಾರ್ವಜನಿಕರಿಗೆ ಉತ್ತಮ ಸಂದೇಶ ನೀಡುವ ಫಲ–ಪುಷ್ಪ ಪ್ರದರ್ಶನ ಆಯೋಜಿಸಲಾಗಿದೆ ಎಂದು ತಿಳಿಸಿದ ಅವರು, ಜಿಲ್ಲೆಯ ರೈತರಿಗೆ ಅವಶ್ಯಕವಿರುವ ಕೋಲ್ಡ್ ಸ್ಟೋರೇಜ್ ಘಟಕ ಹಾಗೂ ಜಿಲ್ಲೆಗೆ ಗ್ಲಾಸ್‌ಹೌಸ್ ಮಂಜೂರು ಮಾಡಿ, ಮುಂದಿನ ಬಾರಿಯ ಫಲ–ಪುಷ್ಪ ಪ್ರದರ್ಶನ ಕಾರ್ಯಕ್ರಮವನ್ನು ಗ್ಲಾಸ್‌ಹೌಸ್‌ನಲ್ಲಿಯೇ ಆಯೋಜನೆ ಮಾಡಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಅವರಿಗೆ ಮನವಿ ಮಾಡಿದರು.

### ತೋಟಗಾರಿಕೆ ಬೆಳೆಗಳಿಂದ ಹೆಚ್ಚಿನ ಆದಾಯಗಳಿಸಿ: ಟಿ.ರಘುಮೂರ್ತಿ

ಶಾಸಕ ಟಿ.ರಘುಮೂರ್ತಿ ಮಾತನಾಡಿ, ಫಲ–ಪುಷ್ಪ ಪ್ರದರ್ಶನ ವೀಕ್ಷಿಸುವ ಮೂಲಕ ಜಿಲ್ಲೆಯ ರೈತರು ತೋಟಗಾರಿಕೆ ಬೆಳೆಗಳ ಮಾಹಿತಿ ಪಡೆದು, ತೋಟಗಾರಿಕೆ ಬೆಳೆಗಳನ್ನು ಬೆಳೆದು ಉತ್ತಮ ಆದಾಯ ಗಳಿಸಬೇಕು ಎಂದರು. ಫಲ–ಪುಷ್ಪ ಪ್ರದರ್ಶನದಲ್ಲಿ ಭಾರತದ ಸಂವಿಧಾನದ ಬಗ್ಗೆ ಕಲಾಕೃತಿ, ಐತಿಹಾಸಿಕ ಚಿತ್ರದುರ್ಗ ಕೋಟೆಯಲ್ಲಿ ಮಳೆ ನೀರು ಕೊಯ್ಲು ಘಟಕಗಳು, ತೋಟಗಾರಿಕೆ ಬೆಳೆಗಳ ಮಿಶ್ರ ಕೃಷಿ ಪದ್ದತಿ ಅಳವಡಿಕೆ ಮಾದರಿ ಸೇರಿದಂತೆ ರೈತರಿಗೆ ಪೂರಕವಾದ, ಉಪಯುಕ್ತವಾದ ಮಾಹಿತಿ ಇದೆ ಎಂದರು.













## ಫಾಸ್ಟ್ ನ್ಯೂಸ್

### ವಾರ್ಷಿಕ ಪ್ರಶಸ್ತಿಗೆ ದಾವಣಗೆರೆ ಜಿಲ್ಲೆಯ 5 ಪತ್ರಕರ್ತರು

» ದಾವಣಗೆರೆ

ಪತ್ರಿಕೋದ್ಯಮದಲ್ಲಿ ಸಲ್ಲಿಸುತ್ತಿರುವ ಅನುಪಮ ಸೇವೆಗೆ ರಾಜ್ಯದ ಪ್ರತಿಷ್ಠಿತ ಪತ್ರಕರ್ತರ ಬೃಹತ್ ಸಂಘಟನೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯುಜೆ) ಕೊಡಮಾಡುವ ವಾರ್ಷಿಕ ಪ್ರಶಸ್ತಿಗೆ ದಾವಣಗೆರೆ ಜಿಲ್ಲೆಯ 5 ಜನರು ಭಾಜನರಾಗಿದ್ದಾರೆ.ಮಲ್ನಾಡವಾಣಿ ಸಂಪಾದಕರಾದ ಕೆ. ಏಕಾಂತಪ್ಪ, ವಿಜಯವಾಣಿ ಸ್ಥಾನಿಕ ಸಂಪಾದಕ ಎಂ.ಬಿ. ನವೀನ್, ಜನತಾವಾಣಿ ಸುದ್ದಿ ಸಂಪಾದಕ ಎಂ.ಎಸ್. ಶಿವಶರಣಪ್ಪ, ಹಿರಿಯ ವ್ಯಂಗ್ಯಚಿತ್ರಕಾರ ಹೆಚ್.ಬಿ. ಮಂಜುನಾಥ್ ಮತ್ತು ಚಂದನ ಟಿವಿ ಹಿರಿಯ ವರದಿಗಾರ ಎ.ಎಲ್. ತಾರಾನಾಥ್ ಅವರುಗಳು ಈ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.ರಾಜ್ಯದ ವಿವಿಧ ಭಾಗಗಳಲ್ಲಿ ಪ್ರತಿ ವರ್ಷವೂ ನಡೆಯುವ ರಾಜ್ಯಮಟ್ಟದ ಪತ್ರಕರ್ತರ ಸಮ್ಮೇಳನದ ಸಂದರ್ಭದಲ್ಲಿ ಕೆಯುಡಬ್ಲ್ಯುಜೆ ಈ ಪ್ರಶಸ್ತಿಗಳನ್ನು ನೀಡುತ್ತಾ ಬಂದಿದೆ ಎಂದು ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ತಿಳಿಸಿದ್ದಾರೆ. ಮಾಧ್ಯಮ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಹಿರಿಯರು ಮತ್ತು ಪ್ರತಿಭಾನ್ವಿತರನ್ನು ಗುರುತಿಸಿ ನೀಡುತ್ತಿರುವ ಈ ಪ್ರಶಸ್ತಿಗೆ ಈ ಬಾರಿ 40ಕ್ಕೂ ಹೆಚ್ಚು ಪತ್ರಕರ್ತರನ್ನು ಆಯ್ಕೆ ಮಾಡಲಾಗಿದ್ದು, ನಾಳೆ ದಿನಾಂಕ 3 ಮತ್ತು 4ರಂದು ದಾವಣಗೆರೆಯಲ್ಲಿ ಏರ್ಪಾಡಾಗಿರುವ 38ನೇ ರಾಜ್ಯ ಪತ್ರಕರ್ತರ ಸಮ್ಮೇಳನದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಿದ್ದಾರೆ.

ಅಭಿನಂದನೆ : ಪತ್ರಿಕೋದ್ಯಮದಲ್ಲಿ ಸಲ್ಲಿಸುತ್ತಿರುವ ಅನುಪಮ ಸೇವೆಗೆ ರಾಜ್ಯದ ಪ್ರತಿಷ್ಠಿತ ಪತ್ರಕರ್ತರ ಬೃಹತ್ ಸಂಘಟನೆ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯುಜೆ) ಕೊಡಮಾಡುವ ವಾರ್ಷಿಕ ಪ್ರಶಸ್ತಿಗೆ ಭಾಜನರಾದ ಜಿಲ್ಲೆಯ ಮಲ್ನಾಡವಾಣಿ ಸಂಪಾದಕರಾದ ಕೆ. ಏಕಾಂತಪ್ಪ, ವಿಜಯವಾಣಿ ಸ್ಥಾನಿಕ ಸಂಪಾದಕ ಎಂ.ಬಿ. ನವೀನ್, ಜನತಾವಾಣಿ ಸುದ್ದಿ ಸಂಪಾದಕ ಎಂ.ಎಸ್. ಶಿವಶರಣಪ್ಪ, ಹಿರಿಯ ವ್ಯಂಗ್ಯಚಿತ್ರಕಾರ ಹೆಚ್.ಬಿ. ಮಂಜುನಾಥ್ ಮತ್ತು ಚಂದನ ಟಿವಿ ಹಿರಿಯ ವರದಿಗಾರ ಎ.ಎಲ್. ತಾರಾನಾಥ್ ಅವರಿಗೆ ಕಾರ್ಯನಿರತ ಪತ್ರಕರ್ತರ ಸಂಘದ ಜಿಲಾಧ್ಯಕ್ಷ ಇ.ಎಂ. ಮಂಜುನಾಥ, ಪ್ರಧಾನ ಕಾರ್ಯದರ್ಶಿ ಎ. ಫಕ್ರುದ್ದೀನ್, ಖಜಾಂಚಿ ಎನ್.ವಿ. ಬದರಿನಾಥ್, ದಾವಣಗೆರೆ ಜಿಲ್ಲಾ ವರದಿಗಾರರ ಕೂಟದ ಪ್ರಧಾನ ಕಾರ್ಯದರ್ಶಿ ಡಾ. ಸಿ.ವರದರಾಜ್, ಖಜಾಂಚಿ ಮಧು ನಾಗರಾಜ್ ಕುಂದುವಾಡ ಅಭಿನಂದನೆ ಸಲ್ಲಿಸಿದ್ದಾರೆ.

### ಗೋಸಿಕೆರೆ ಶಾಲೆಯಲ್ಲಿ ಶಾಲಾ ವಾರ್ಷಿಕೋತ್ಸವ-ಗುರು ವಂದನಾ ಕಾರ್ಯಕ್ರಮ



» ಪರಶುರಾಂಪುರ

ವಿದ್ಯಾರ್ಥಿಗಳಲ್ಲಿ ಸಂಕುಚಿತ ಮನೋಭಾವನೆ ಹೋಗಲಾಡಿಸಲು ಶಾಲಾ ವಾರ್ಷಿಕೋತ್ಸವ ಉತ್ತಮ ವೇದಿಕೆ ಎಂದು ಬಿಇಓ ಕೆ.ಎಸ್ ಸುರೇಶ್ ತಿಳಿಸಿದರು.ಸಮೀಪ ಗೋಸಿಕೆರೆ ಗ್ರಾಮದ ಸ.ಹಿ.ಪ್ರಾ.ಶಾಲಾ ಆವರಣದಲ್ಲಿ ಬುಧವಾರ ಆಯೋಜಿಸಿದ್ದಾ ಶಾಲಾ ವಾರ್ಷಿಕೋತ್ಸವ ಹಾಗೂ ಗುರು ವಂದನಾ ಕಾರ್ಯಕ್ರಮದಲ್ಲಿ ಮಾತನಾಡಿದರು.ಓದು ಬರಹದ ಜತೆಗೆ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸುವ ಹವ್ಯಾಸವನ್ನ ಸಹಾ ರೂಢಿಸಿಕೊಳ್ಳುವುದು ಉತ್ತವಾದ ಬೆಳವಣಿಗೆಯಾಗಿದೆ ಎಂದರು. ಗ್ರಾಪಂ ಅಧ್ಯಕ್ಷೆ ಓಬಕ್ಕಹನಮಂತರಾಯ ಮಾತನಾಡಿ,ಚಿಕ್ಕಂದಿನಿಂದಿನಲೇ ವೇದಿಕೆಗಳ ಕಾರ್ಯಕ್ರಮಗಳಲ್ಲಿ ಭಾಗವಹಿಸುವುದು ಬುದ್ಧಿಶಕ್ತಿ ಧೈರ್ಯ ಹೆಚ್ಚಿ ಭಯಹೋಗಲಾಡಿಸಬಹುದು ಎಂದರು. ಸಂದರ್ಭದಲ್ಲಿ ಗ್ರಾಪಂ ಸದಸ್ಯರಾದ ಓಂಕಾರಮ್ಮನಾಗರಾಜ,ಓಂಕಾರಮೂರ್ತಿ,ಕರೆತಿಪ್ಪೆ ರಾಜಣ್ಣ,ಮಲ್ಲಿಕಾರ್ಜುನ,ನಾಗೇಂದ್ರಪ್ಪ,ಎಸ್ಡಿಎಂಸಿ ಅಧ್ಯಕ್ಷ ಓಬಣ್ಣ, ಎಡಿಪಿ ತಿಪ್ಪೇಸ್ವಾಮಿ,ಇಸಿಓಗಳಾದ ರವಿಶಂಕರ್,ಮಾರುತಿ ಭಂಡಾರಿ,ಬಸಣ್ಣ,ಸದರಿ ಶಾಲೆಯಲ್ಲಿ ಕರ್ತವ್ಯ ನಿರ್ವಹಿಸಿದ ಶಿಕ್ಷಕರಾದ ಅಜ್ಜಪ್ಪ,ಕೆ.ಈಸ್ವರಪ್ಪ,ರುದ್ರಮುನಿ,ಬಿ.ಎಂ ರಂಗಯ್ಯ,ರಂಗಸ್ವಾಮಿ,ಎಚ್.ಆರ್ ರಾಧಮಣಿ,ಮಮತ,ಲಕ್ಷ್ಮಕ್ಕ,ಸಿಆರ್‌ಪಿಗಳಾದ ಶಿವಶಂಕರಪ್ಪ,ಎಸ್.ಆರ್ ರಘು,ಶಿವರಂಗಪ್ಪ,ಗಿ.ಎನ್ ನಾಗರಾಜ,ಕೆ.ವೀರಭದ್ರಪ್ಪ,ಕಸ್ತೂರಿ ನಾಯಕ,ಕೆ.ರಮೇಶ್,ಮುಖ್ಯ ಶಿಕ್ಷಕ ಕೆ.ಮಂಜುನತ,ಪ್ರಾ.ಶಿಕ.ಸಂಘದ ಉಪಾಧ್ಯಕ್ಷ ಡಿ.ಟಿ ಹನಮಂತರಾಯ,ಸಂಘಟನಾ ಕಾರ್ಯದರ್ಶಿ ಕೆ.ವೀರಭದ್ರಪ್ಪ,ರಾಜ್ಯ ಪರಿಷತ್ ಸದಸ್ಯ ಕೆ.ಬಸವರಾಜು,ಸೆಂಟಾಡ್ ಸಂಸ್ಥೆಯ ಸಿಆರ್‌ಪಿ ಜಯಣ್ಣ,ಗ್ರಾಪಂ ಹಾಗೂ ಎಸ್ಡಿಎಂಸಿ ಸದಸ್ಯರು , ಶಾಲಾ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು,ಗ್ರಾಮಸ್ಥರು ಉಪಸ್ಥಿತರಿದ್ದರು.

### ಸಚಿವರ ಪ್ರವಾಸ

» ದಾವಣಗೆರೆ

ಗಣಿ ಮತ್ತು ಭೂವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ಅವರ ಫೆಬ್ರವರಿ 3 ಮತ್ತು 4 ರಂದು ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ.

## ತರಬೇತಿ ಕಾರ್ಯಾಗಾರದಲ್ಲಿ ಜಿಲ್ಲಾ ನ್ಯಾಯಾಧೀಶೆ ಕೆ.ಬಿ.ಗೀತಾ

# ಬಾಲ್ಯವಿವಾಹ ಕಂಡುಬಂದ್ರೆ ಕಾರ್ಯಪ್ರವೃತ್ತರಾಗಿ

» ಚಿತ್ರದುರ್ಗ

ಎಲ್ಲಿಯಾದರೂ ಬಾಲ್ಯವಿವಾಹ ನಡೆಯುತ್ತಿದೆ ಎಂಬ ಮಾಹಿತಿ ಬಂದ ತಕ್ಷಣವೇ ಅಧಿಕಾರಿಗಳು ಕಾರ್ಯ ಪ್ರವೃತ್ತರಾಗಬೇಕು ಮತ್ತು ಬಾಲ್ಯವಿವಾಹ ಪ್ರಕರಣ ತಡೆಯುವ ನಿಟ್ಟಿನಲ್ಲಿ ಎಲ್ಲ ರೀತಿಯ ಪ್ರಯತ್ನ ಮಾಡಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಕೆ.ಬಿ. ಗೀತಾ ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಗುರುವಾರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಢಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರುಗಳ ಸಹಯೋಗದಲ್ಲಿ ಆಯೋಜಿಸಿದ್ದ ಬೇಟಿ ಬಚಾವೋ–ಬೇಟಿ ಪಡಾವೋ ಯೋಜನೆಯಡಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಬಾಲ್ಯ ವಿವಾಹ ನಿಷೇದ ಕಾಯ್ದೆ, ಪೋಕ್ಸೋ ಕಾಯ್ದೆ, ಕೆಲಸದ ಸಮಯದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿವಾರಿಸುವಿಕೆ, ನಿಷೇಧಿಸುವಿಕೆ) 2013ರ ಕಾಯ್ದೆ ಕುರಿತು ಒಂದು ದಿನದ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.




ಆರ್ಥಿಕವಾಗಿ ಶೋಷಿತರಾಗಿರುವ ಕುಟುಂಬಗಳಲ್ಲಿ ಬಾಲ್ಯವಿವಾಹ ಪ್ರಕರಣಗಳು ಹೆಚ್ಚಾಗಿ ಕಂಡುಬರುವ ಸಾಧ್ಯತೆ ಇರುತ್ತದೆ. ಬಾಲ್ಯವಿವಾಹ ನಡೆಯುವುದು ಕಂಡು ಬಂದಲ್ಲಿ ಸಂಬಂಧಪಟ್ಟ ಅಧಿಕಾರಿಗಳಿಗೆ ಮಾಹಿತಿ ನೀಡುವುದರಿಂದ ಭವಿಷ್ಯದಲ್ಲಾಗುವ ತೊಂದರೆ, ದುಷ್ಪಾರಿಣಾಮ ತಡೆಯಬಹುದು. ಬಾಲ್ಯವಿವಾಹ ತಡೆಗಟ್ಟಿ, ಅಂತಹ ಮಕ್ಕಳನ್ನು ರಕ್ಷಣೆ ಮಾಡುವುದು ನಮ್ಮೆಲ್ಲರ ಜವಾಬ್ದಾರಿ ಎಂದು ಹೇಳಿದರು.

ಬಾಲ್ಯವಿವಾಹ ನಿಷೇಧ ಕಾಯ್ದೆ, ಪೋಕ್ಸೋ ಕಾಯ್ದೆ ಹಾಗೂ ಕೆಲಸದ ಸ್ಥಳಗಳಲ್ಲಿ ಮಹಿಳೆಯರ ಮೇಲಿನ ಲೈಂಗಿಕ ಕಿರುಕುಳ 2013ರ ಕಾಯ್ದೆಗಳ ಬಗ್ಗೆ ಜನಸಾಮಾನ್ಯರಿಗೆ ಅಧಿಕಾರಿಗಳು ಜಾಗೃತಿ ಮೂಡಿಸುವ ಮೂಲಕ ಹಾಗೂ ಉತ್ತಮ ಸಮಾಜ ನಿರ್ಮಾಣ ಮಾಡುವಲ್ಲಿ ಕಟಿಬದ್ಧರಾಗಿ ಕಾರ್ಯ ನಿರ್ವಹಿಸಿದರೆ ಇನ್ನಷ್ಟು ಅಪರಾಧಗಳನ್ನು ತಪ್ಪಿಸಬಹುದು ಎಂದು ಹೇಳಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್. ಜೆ.ಸೋಮಶೇಖರ್ ಮಾತನಾಡಿ, ಪ್ರಸ್ತುತ ದಿನಮಾನಗಳಲ್ಲಿ ಲೈಂಗಿಕ ಕಿರುಕುಳ ಪ್ರಕರಣಗಳು ದಿನೇ ದಿನೇ ಹೆಚ್ಚಾಗುತ್ತಿರುವುದರಿಂದ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಜಾಗೃತಿ ಮೂಡಿಸುವ ಮೂಲಕ ಅಧಿಕಾರಿಗಳು ಈ ಕಾಯ್ದೆಯ ಆಶಯಗಳಿಗೆ ಅನುಗುಣವಾಗಿ ಕಾರ್ಯನಿರ್ವಹಿಸಬೇಕು ಎಂದು ಸಲಹೆ ನೀಡಿದರು.

ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಮಾತನಾಡಿ, ಮಕ್ಕಳು ಈ ದೇಶದ ಸಂಪತ್ತು, ಮುಂದಿನ ಪೀಳಿಗೆಯಲ್ಲಿ ಭವಿಷ್ಯದ ನಾಡನ್ನ ಕಟ್ಟಿ ಬೆಳೆಸುವ ಶಕ್ತಿ ಮಕ್ಕಳಿಗೆ ಇದೆ. ಮಕ್ಕಳಿಗೆ ನೈತಿಕ, ಮೌಲ್ಯಯುತ ಶಿಕ್ಷಣವನ್ನು ನೀಡುವುದು ಅಗತ್ಯವಾಗಿದೆ ಎಂದರು.

ಕೆಲಸದ ಸ್ಥಳದಲ್ಲಿ ಲೈಂಗಿಕ ಕಿರುಕುಳ ತಡೆ ಕಾಯ್ದೆ ಕುರಿತು ಮಕ್ಕಳ ಕಲ್ಯಾಣ ಸಮಿತಿ ಸದಸ್ಯೆ ಡಿ.ಕೆ.ಶೀಲಾ ಹಾಗೂ ಬಾಲ್ಯವಿವಾಹ ನಿಷೇಧ ಕಾಯ್ದೆ, ಪೋಕ್ಸೋ ಕಾಯ್ದೆ ಕುರಿತು ಕೊಪ್ಪಳ ಯುನಿಸೆಫ್ ಮಕ್ಕಳ ಸಂರಕ್ಷಣಾ ಯೋಜನೆ ಪ್ರಾದೇಶಿಕ ಸಂಯೋಜಕ ಡಾ.ಕೆ.ರಾಘವೇಂದ್ರ ಭಟ್ ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಎಂ.ವಿಜಯ್, ಹೆಚ್ಚುವರಿ ಪೋಲಿಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ಡಿ.ಡಿ.ಪಿ.ಐ ರವಿಶಂಕರ್ ರೆಡ್ಡಿ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್ ಹಾಗೂ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಬಾಗವಹಿಸಿದ್ದರು.

# 12 ನೇ ಶತಮಾನ ಕ್ರಾಂತಿಪುರುಷರ ಯುಗ

## ಕಾಯಕ ನಿಷ್ಠೆ, ಭಕ್ತಿಯ ಪರಾಕಾಷ್ಠೆ ತೋರಿದ ಶ್ರೀ ಮಡಿವಾಳ ಮಾಚಿದೇವರು; ಜಿಲ್ಲಾಧಿಕಾರಿ

» ದಾವಣಗೆರೆ

12 ನೇ ಶತಮಾನದಲ್ಲಿ ಹಲವಾರು ಕ್ರಾಂತಿ ಪುರುಷರ ಜನನವಾಗಿದ್ದು, ಅಂದಿನ ಶೋಷಣೆ, ಅಸ್ಪೃಶ್ಯತೆ, ಅನಕ್ಷರಸ್ಥತೆ, ಜಾತಿಯತೆ ವಿರುದ್ಧ ತಮ್ಮ ವಚನಗಳ ಮೂಲಕ ಹೋರಾಟ ಮಾಡಿದರು. ಅವರಲ್ಲಿ ಕಾಯಕ ನಿಷ್ಠೆ, ಭಕ್ತಿಯ ಪರಾಕಾಷ್ಠೆ ತೋರಿದವರು ಶ್ರೀ ಮಡಿವಾಳ ಮಾಚಿದೇವರು ಎಂದು ಜಿಲ್ಲಾಧಿಕಾರಿ ಡಾ.ಎಂ.ವಿ.ವೆಂಕಟೇಶ್ ತಿಳಿಸಿದರು.

ಅವರು ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಜಿಲ್ಲಾ ಮಡಿವಾಳ ಮಾಚಿದೇವ ಸಂಘ, ಇವರ ಆಶ್ರಯದಲ್ಲಿ ಆಯೋಜಿಸಲಾಗಿದ್ದ ವಚನ ಸಂರಕ್ಷಕ, ಶ್ರೀ ಮಡಿವಾಳ ಮಾಚಿದೇವರ ಜಯಂತಿ ಕಾರ್ಯಕ್ರಮದಲ್ಲಿ ಮಾಚಿದೇವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.



ಬಸವಣ್ಣನವರು ಶೋಷಣೆಯ ವಿರುದ್ಧ ಅದರ ನಿರ್ಮೂಲನೆ ಮಾಡುವ ಸಲುವಾಗಿ ಅನುಭವ ಮಂಟಪ ಕಟ್ಟಿ ಕ್ರಾಂತಿಕಾರಿ ಬದಲಾವಣೆ ಮಾಡಿದರು. ಉತ್ತಮ ಸಮಾಜ ನಿರ್ಮಾಣ ಮಾಡಿ, ಜಾತಿಯತೆ, ಶೋಷಣೆ ವಿರುದ್ಧ ದನಿ ಎತ್ತಿದರು, ಅದರಲ್ಲಿ ಮಡಿವಾಳ ಮಾಚಿದೇವರು ಒಬ್ಬರು. ಸಿಂದಗಿ ತಾಲ್ಲೂಕಿನ ದೇವರ ಹಿಪ್ಪರಗಿ ಗ್ರಾಮದಲ್ಲಿ ಜನಿಸಿದ ಮಡಿವಾಳ ಮಾಚಿದೇವರು ಕಾಯಕ ನಿಷ್ಠೆ, ಭಕ್ತಿಯ ಪರಾಕಾಷ್ಠೆಯಲ್ಲಿ ಹಿಮಾಲಯ ಪರ್ವತ ಇದ್ದಂತೆ ಎಂದು ಹೇಳಿದರು.

ಶರಣರಾಗಿದ್ದ ಮಡಿವಾಳ ಮಾಚಿದೇವರು ತನ್ನ ಕುಲದ ಕಾಯಕ ಮಾಡುತ್ತಲೇ, ಸಮಾಜದ ಅನಿಷ್ಟ ಪಿಡುಗುಗಳ ವಿರುದ್ಧ ಹೋರಾಟ ಮಾಡಿ ಉತ್ತಮ ಸಮಾಜ ನಿರ್ಮಾಣಕ್ಕೆ ಶ್ರಮಿಸಿದರು. ಅಂತಹ ಶ್ರೇಷ್ಠ ವ್ಯಕ್ತಿತ್ವದ ಮಾಚಿದೇವರ ಆದರ್ಶದಲ್ಲಿ ಸಾಗುವ ಮೂಲಕ ಬದುಕಿನ ಬಗ್ಗೆ ಅವರು ಹಾಕಿಕೊಟ್ಟ ಮಾರ್ಗದರ್ಶನ, ಬೋಧನೆ ಅನುಸರಿಸಿ, ಮುಂದಿನ ಪೀಳಿಗೆಗೆ ಉತ್ತಮ ವೇದಿಕೆ ನಿರ್ಮಾಣ ಮಾಡಬೇಕಾಗಿದೆ ಎಂದು ಸಲಹೆ ನೀಡಿದರು.

ದಾವಣಗೆರೆ ಜಿಲ್ಲಾ ಮಡಿವಾಳ ಮಾಚಿದೇವ ಸಂಘದ ಜಿಲ್ಲಾಧ್ಯಕ್ಷ ಎಂ.ನಾಗೇಂದ್ರಪ್ಪ ಮಾತನಾಡಿ, ಶೋಷಿತ ಸಮಾಜದಲ್ಲಿ ಕಟ್ಟಕಡೆಯ ಸಮಾಜ ನಮ್ಮದು. ನಮ್ಮ ಸಮುದಾಯವನ್ನು ಪರಿಶಿಷ್ಟ ಜಾತಿ ಪಟ್ಟಿಗೆ ಸೇರಿಸುವ ಸಲುವಾಗಿ ಅನ್ನಪೂರ್ಣಮ್ಮ ವರದಿ ರಾಜ್ಯ ಸರ್ಕಾರಕ್ಕೆ ಸಲ್ಲಿಕೆಯಾಗಿದ್ದು ಸರ್ಕಾರದ ಗಮನಕ್ಕೆ ತರುವಂತೆ ಮನವಿ ಮಾಡಿದರು.

ಈ ವೇಳೆ ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್,ಜಿ.ಪಂ.ಉಪಕಾರ್ಯದರ್ಶಿ ಕೃಷ್ಣನಾಯ್ಕ್, ಪಶುಸಂಗೋಪನಾ ಇಲಾಖೆ ಉಪನಿರ್ದೇಶಕ ಡಾ; ಚಂದ್ರಶೇಖರ್ ಸುಂಕದ್, ಸಂಘದ ಪ್ರಧಾನ ಕಾರ್ಯದರ್ಶಿ ಎನ್. ಓಂಕಾರಪ್ಪ, ಸಹ ಕಾರ್ಯದರ್ಶಿ ಆರ್.ಎನ್. ಧನಂಜಯ, ಉಪಾಧ್ಯಕ್ಷರಾದ ಪಿ.ಮಂಜುನಾಥ್, ವಿಜಯಕುಮಾರ್, ಖಜಾಂಚಿ ಸುರೇಶ್ ಕೋಗುಂಡೆ, ಪತ್ರಕರ್ತ, ಎಂ.ವೈ.ಸತೀಶ್, ಎಂ.ರುದ್ರೇಶ್, ಮಂಜುನಾಥ್ ಕಕ್ಕರಗೊಳ್ಳ, ರವಿ ಚಿಕ್ಕಣ್ಣ, ಡೈಮಂಡ್ ಮಂಜುನಾಥ್, ಸುಭಾಷ್, ಬಾತಿ ಶಂಕರ್, ನಾಗಮ್ಮ, ದುಗ್ಗಪ್ಪ, ಅಂಜಿನಪ್ಪ ಪೂಜಾರ್, ಗುಡ್ಡಪ್ಪ, ಬೊಮ್ಮಣ್ಣ, ಮಂಜುನಾಥ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ಕಾರ್ಯದರ್ಶಿ ರವಿಚಂದ್ರ ಹಾಗೂ ಇತರರು ಇದ್ದರು.

## ಮೇಘಾ ಕೆಸಿವಿ ಕಪ್ ಪಂದ್ಯಾವಳಿ ಇಂದಿನಿಂದ




» ಚಿತ್ರದುರ್ಗ

ನಗರದ ಅನುಭವ ಮಂಟಪದಲ್ಲಿ ಫೆ.3 ಮತ್ತು 4 ರಂದು ಅಖಿಲ ಭಾರತ ಓಪನ್ ಕರಾಟೆ ಚಾಂಪಿಯನ್ ಶಿಫ್ ಮೇಘಾ ಕೆಸಿವಿ ಕಪ್ ಪಂದ್ಯಾವಳಿ ನಡೆಯಲಿದೆ ಎಂದು ಬ್ರೈಟ್ ಸ್ಟಾರ್ ಕರಾಟೆ ಅಸೋಶಿಯೇಷನ್ ಸಂಸ್ಥಾಪಕ ಶಂಕರ್ ತಿಳಿಸಿದ್ದಾರೆ.ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, 29 ನೇ ರಾಷ್ಟ್ರ ಮಟ್ಟದ ಪಂದಾವಳಿ ಇದಾಗಿದ್ದು, ಪಶ್ಚಿಮ ಬಂಗಾಳ, ತಮೀಳುನಾಡು, ಕೇರಳ, ಪಂಜಾಬ್, ಅಂಧ್ರ ಪ್ರದೇಶ, ತೆಲಾಂಗಣ ಮತ್ತು ಕರ್ನಾಟಕದಿಂದ 1500 ಕ್ಕಂತ ಹೆಚ್ಚು ಕ್ರೀಡಾಪಟುಗಳು ಭಾಗವಹಿಸಲಿದ್ದಾರೆ ಎಂದರು.ವಿವಿಧ ರಾಜ್ಯಗಳಿಂದ 40 ಜನ ತೀರ್ಪುಗಾರರು ಆಗಮಿಸಲಿದ್ದಾರೆ. 6–25 ವರ್ಷ ವಯೋಮಾನದ ಕ್ರೀಡಾಪಟುಗಳಿಗೆ ಸ್ಪರ್ಧೆಗಳು ನಡೆಯಲಿದ್ದು, ಇದರಲ್ಲಿ 18–25 ವರ್ಷದೊಳಗಿನ ಸ್ಪರ್ಧೆಯಲ್ಲಿ ವಿಜೇತರಾದ ಕ್ರೀಡಾಪಟುವಿಗೆ 25 ಸಾವಿರ ನಗದು ನೀಡಲಾಗುವುದು ಮತ್ತು ಪ್ರತಿ ಸ್ಪರ್ಧೆಯಲ್ಲಿ ವಿಜೇತರಾದ ಕ್ರೀಡಾಪಟುವಿಗೆ ಆಕರ್ಷಕ ಟ್ರೋಫಿ ಹಾಗೂ ಪದಕಗಳನ್ನು ನೀಡಲಾಗುವುದು ಎಂದು ತಿಳಿಸಿದರು. ಪಂದ್ಯಾವಳಿಯು ಫೆ.3 ರಂದು ಬೆಳಗ್ಗೆ 11.30ಕ್ಕೆ ಪಂದ್ಯಾವಳಿ ಉದ್ಘಾಟನೆ ಆಗಲಿದ್ದು, ಚಲನಚಿತ್ರ ನಟ ಸುಮನ್ ತಳವಾರ್, ಕ್ರೀಡಾ ಸಚಿವ ನಾಗೇಂದ್ರ, ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್, ಮಾಜಿ ಸಚಿವ ಹೆಚ್. ಆಂಜನೇಯ, ಶಾಸಕ ಕೆ.ಸಿ.ವಿರೇಂದ್ರ ಪಪ್ಪಿ, ಸಂಗಮೇಶ, ಕೆಡಿಪಿ ಸದಸ್ಯ ಕೆ.ಸಿ.ನಾಗರಾಜ್, ನಗರಸಭೆ ಮಾಜಿ ಆಧ್ಯಕ್ಷ ಬಿ.ಕಾಂತರಾಜ್, ಚಿತ್ರ ನಟ ದೊಡ್ಡಣ್ಣ, ರಘು ಚಂದನ್, ಸಂದೀಪ್, ಭಾಸ್ಕರ್, ಸುರೇಶ್ ಬಾಬು, ಸೂರಪ್ಪ ಸೇರಿದಂತೆ ಇತರರು ಭಾಗವಹಿಸಲಿದ್ದಾರೆ ಎಂದು ಹೇಳಿದರು.ಸುದ್ದಿಗೋಷ್ಠಿಯಲ್ಲಿ ಶೇಖರ್, ಸುರೇಶ್, ತಿಪ್ಪೇಸ್ವಾಮಿ, ತಿಪ್ಪೇಶ್, ಇರ್ಫಾನ್, ಕಿಶೋರ್ ಹಾಜರಿದ್ದರು.

## ಪ್ರಮುಖ ಸುದ್ದಿ

# ಸಾಹಿತ್ಯ ಜಾತ್ರೆಯಲ್ಲಿ ಕುಣಿದು ಕುಪ್ಪಳಿಸಿದ ಸಾಹಿತ್ಯಾಭಿಮಾನಿಗಳು

» ಹೊಸದುರ್ಗ

ರಂಗಭೂಮಿ, ಸಾಹಿತ್ಯಿಕ, ಧಾರ್ಮಿಕ, ಸಾಂಸ್ಕೃತಿಕ, ಸಾಮಾಜಿಕ ಕ್ಷೇತ್ರಗಳಲ್ಲಿ ಹಲವು ಪ್ರಥಮಗಳಿಗೆ ಸಾಣೇಹಳ್ಳಿ ಸಾಕ್ಷಿಯಾಗಿದೆ ಆದೇ ರೀತಿ ಶುಕ್ರವಾರ ಮತ್ತೊಂದು ಪ್ರಥಮಕ್ಕೆ ಸಾಕ್ಷ್ಯಯಾಯಿತು.ಅದುವೇ ಚಿತ್ರದುರ್ಗ– ಚಿಕ್ಕಮಗಳೂರು ಜಿಲ್ಲೆಗಳ ಅಂತರ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ ಹೌದು ಸಾಣೇಹಳ್ಳಿಯ ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿಯವರ ಸರ್ವಾಧ್ಯಕ್ಷತೆಯಲ್ಲಿ ಫೆ. 2 ರಂದು ಮತ್ತು ಫೆ.3 ರಂದು ಶನಿವಾರ ಎರಡು ದಿನಗಳ ಕಾಲ ಸಾಹಿತ್ಯ ಸಮ್ಮೇಳನ ನಡೆಯಲಿದ್ದು ಸಮ್ಮೇಳನದ ಅಂಗವಾಗಿ ಶುಕ್ರವಾರ ಬೆಳಿಗ್ಗೆ ಸಮ್ಮೇಳನಾಧ್ಯಕ್ಷರ ಮೆರವಣಿಗೆ ಬಹು ವರ್ಣರಂಜಿತವಾಗಿತ್ತು.



ಸಮ್ಮೇಳನಾಧ್ಯಕ್ಷರ ಮೆರವಣಿಗೆಗೆ ಸಾಣೇಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ರತ್ನಮ್ಮ ಚಾಲನೆ ನೀಡಿದರು. ಮೆರವಣಿಗೆಯಲ್ಲಿ ಶಾಲಾ ಮಕ್ಕಳು ಕುಣಿದು ಕುಪ್ಪಳಿಸಿದರು.ಸಾಹಿತ್ಯಾಭಿಮಾನಿಗಳು ಸಂಭ್ರಮಿಸಿದರು.ಮೆರವಣಿಗೆಯಲ್ಲಿ ಭುವನೇಶ್ವರಿ,ಕನ್ನಡಾಂಬೆಯು ರಥ, ವೀರಗಾಸೆ,ನಂದಿಕೋಲು ಕುಣಿತ,ಡೊಳ್ಳು ಕುಣಿತ,ಗೊರವರ ಕುಣಿತ,ಕಹಳೆ,ಗೊಂಬೆಗಳ ನೃತ್ಯ ಮೆರವಣಿಗೆಗೆ ಆಕರ್ಷಣೆ ನೀಡಿದವು.

ಮೆರವಣಿಗೆಯು ಶ್ರೀ ಮಠದಿಂದ ಪ್ರಾರಂಭಗೊಂಡು ಗ್ರಾಮದ ಕೇರಿ ಕೇರಿಯಲ್ಲೂ ಸಂಬ್ರಮಿಸಿ ಕಾರ್ಯಕ್ರಮದ ವೇದಿಕೆ ತಲುಪಿತು.ಸಮ್ಮೇಳನಾಧ್ಯಕಾದ ಶ್ರೀ ಪಂಡಿತಾರಾಧ್ಯ ಶ್ರೀಗಳು ಮೆರವಣಿಗೆ ಕೊನೆಗೊಳ್ಳುವವರೆಗೂ ಸಹಾ ನಡೆದುಕೊಂಡೆ ಮೆರವಣಿಗೆಯಲ್ಲಿ ಸಾಗಿದರು.ಮೆರವಣಿಗೆಗೂ ಮುನ್ನಾ ತಾಲೂಕು ದಂಡಾಧಿಕಾರಿ ತಿರುಪತಿಪಾಟೀಲ ದ್ವಜಾರೋಹಣ ನೆರವೇರಿಸಿದರು. ಸ್ವಾಗತ ಸಮಿತಿಯ ಅಧ್ಯಕ್ಷ ಎ.ಸಿ.ಚಂದ್ರಪ್ಪ ನಾಡದ್ವಜಾರೋಹಣ ನೆರವೇರಿಸಿದರು.ಸ್ವಾಗತ ಸಮಿತಿಯ ಕೋಶಾಧ್ಯಕ್ಷ ಆರ್.ಮಲ್ಲಿಕಾರ್ಜುನಯ್ಯ ಪರಿಷತ್ತಿನದ್ವಜಾರೋಹಣನೆರವೇರಿಸಿದರು. ಮೆರಣಿಗೆಯಲ್ಲಿ

ಚಿತ್ರದುರ್ಗ– ಚಿಕ್ಕಮಗಳೂರು ಜಿಲ್ಲೆಗಳ ಅಂತರ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಸಾಣೇಹಳ್ಳಿಯು ನವವಧುವಿನಂತೆ ಸಿಂಗಾರಗೊಂಡು ಸಾಹಿತ್ಯಾಭಿಮಾನಿಗಳ ಸ್ವಾಗತಕ್ಕೆ ಸಿದ್ಧವಾಗಿತ್ತು, ಶ್ರೀಮಠದ ಆವರಣ ಮತ್ತು ಸಮ್ಮೇಳನ ನೆಡೆಯುವ ಸ್ಥಳ, ಗ್ರಾಮದ ಪ್ರಮುಖ ಬೀದಿಗಳು, ಚರಂಡಿಗಳು ಸ್ವಚ್ಛಗೊಂಡಿದ್ದವು ಅರಿಶಿಣ ಕುಂಕುಮ ಬಣ್ಣದ ಕನ್ನಡದ ಬಟ್ಟೆಯ ತೋರಣಗಳುಮತ್ತುವಿದ್ಯುತ್‌ದೀಪಗಳಿಂದ ಸರ್ವಾಲಂಕೃತವಾಗಿ ಕಂಗೊಳಿಸುತ್ತಿತ್ತು. ಮೆರವಣಿಗೆಯಲ್ಲಿ ರಾಜ್ಯ ಕ.ಸಾ.ಪ ಅಧ್ಯಕ್ಷ ಡಾ:ಎಂ.ಮಹೇಶ್‌ಜೋಷಿ, ಚಿತ್ರದುರ್ಗ ಜಿಲ್ಲಾದ್ಯಕ್ಷಶಿವಸ್ವಾಮಿ, ಚಿಕ್ಕಮಗಳೂರು ಜಿಲ್ಲಾ ಅಧ್ಯಕ್ಷ ಸೂರಿಶ್ರೀನಿವಾಸ್ ಸೇರಿದಂತೆ ಅಪಾರ ಸಂಖ್ಯೆಯ ಸಾಹಿತ್ಯಾಭಿಮಾನಿಗಳು ಭಾಗವಹಿಸಿದ್ದರು.

ನಾಡಿನ ಖ್ಯಾತ ಶಿವಸಂಚಾರ ಕಲಾವಿದರಾದ ನಾಗರಾಜು, ದ್ರಾಕ್ಷಿಯಣಿ ಕೆ, ಜ್ಯೋತಿ ಕೆ ಮತ್ತು ಶರಣ್ ಕುಮಾರ್ ತಂಡ ಹಾಗೂ ಸಾಣೇಹಳ್ಳಿ ಅಕ್ಕನಬಳಗದವರಿಂದ ಕನ್ನಡಗೀತೆ, ಭಾವಗೀತೆ, ಜನಪದಗೀತೆ, ವಚನಗೀತೆ ಮತ್ತು ರಂಗಗೀತೆಗಳ ರಸದೌತಣ ನೀಡಿದರು.

ಸಮ್ಮೇಳನಾಧ್ಯಕ್ಷರಾದ ಪಂಡಿತಾರಾಧ್ಯ ಸ್ವಾಮೀಜಿಯವರು ಸಾರೋಟಿನಲ್ಲಿನ ಮೆರವಣಿಗೆಯನ್ನು ನಿರಾಕರಿಸಿ ಪಾದಯಾತ್ರೆ ಮಾಡಲು ಒಪ್ಪಿರುವುದು ಸಾಹಿತ್ಯ ಪರಿಷತ್ತಿನ ಪರಂಪರೆಯ ಪರಿವರ್ತನೆಯಾದಂತಾಗಿದೆ. ಶ್ರೀಗಳು ಹೊಸ ದಾರಿ ಸೃಷ್ಟಿಸಿದ್ದಾರೆ. ಅವರ ಕೃತಿಗಳ ಮೆರವಣಿಗೆಯ ಮುಂದೆ ಪಾದಯಾತ್ರೆಯಲ್ಲಿ ಸಾಗುವುದು ಅವರ ವೈಚಾರಿಕತೆಯ ದ್ಯೋತಕವಾಗಿದೆ. ಪಾದಯಾತ್ರೆಯ ಮಾರ್ಗವು ಸ್ವಚ್ಛಗೊಂಡಿದ್ದು ತಳಿರು ತೋರಣಗಳಿಂದ, ಚಿತ್ತಾರ ರಂಗೋಲಿಗಳಿಂದ ಶೃಂಗಾರಗೊಂಡಿದ್ದು ಗ್ರಾಮದ ಎಲ್ಲರೂ ಸರ್ವಾಧ್ಯಕ್ಷರನ್ನು ಗೌರವಿಸಲು ಫಲಪುಷ್ಪ ಭಕ್ತಿ ಕಾಣಿಕೆಯೊಂದಿಗೆ ಕಾತುರದಿಂದ ಕಾಯುತ್ತಿದ್ದರು,ನಾಡಿನ ಪ್ರಸಿದ್ಧ ಕಲಾತಂಡಗಳು ಪಾದಯಾತ್ರೆಗೆ ಮೆರುಗು ನೀಡಿದವು.

ಈ ಸಮ್ಮೇಳದ ಸರ್ವಾಧ್ಯಕ್ಷರಾಗಿರುವಂತಹ ಶ್ರೀ ಪಂಡಿತಾರಾಧ್ಯ ಶ್ರೀಗಳು ನಿಜವಾದ ಅರ್ಥದ ಧರ್ಮಗುರುಗಳು ಎಂದು ನಾನು ಹೇಳಲು ಇಚ್ಛಿಸುತ್ತೇನೆ ಎಂದರು.ಪೂಜ್ಯರು ಒಂದು ಮಠದ ಮುಖ್ಯಸ್ಥರಾಗಿದ್ದರೂ ಕೂಡ ಪ್ರಬುದ್ಧ ಲೇಖಕರಾಗಿದ್ದಾರೆ,ವಿದ್ವಾಂಸರಾಗಿದ್ದಾರೆ ವೈಚಾರಿಕ ಚಿಂತಕರಾಗಿದ್ದಾರೆ,12 ನೇ ಶತಮಾನದ ಶರಣರ ವಿಚಾರಗಳಿಗೆ ತಮ್ಮನ್ನ ಸಂಪೂರ್ಣವಾಗಿ ಸಮರ್ಪಿಸಿಕೊಂಡಂತಹ ಪೂಜ್ಯರು 120 ಕ್ಕೂ ಹೆಚ್ಚು ಗ್ರಂಧಗಳನ್ನ ರಚಿಸಿದ್ದಾರೆ. ಅವರದ ಸಾಹಿತ್ಯ ಸೇವೆಯನ್ನ ಮನ್ನಿಸಿ ಕುವೆಂಪು ವಿಶ್ವ ವಿದ್ಯಾಲಯದವರು ಅವರಿಗೆ ಗೌರವ ಡಾಕ್ಟರೇಟ್ ನೀಡಿ ಗೌರವಿಸಿದೆ.

ಪೂಜ್ಯರು ಶ್ರೀ ಮಠದ ಅಧಿಕಾವನ್ನ ವಹಿಸಿಕೊಂಡು 48 ವರ್ಷಗಳಾಗಿವೆ, ಈ 8 ವರ್ಷಗಳ ಅವಧಿಯಲ್ಲಿ ಈ ಭಾಗದಲ್ಲಿ ನಡೆದರುವಂತಹ ಧಾರ್ಮಿಕ.ಸಾಮಾಜಿಕ ಸಂಸ್ಕೃತಿಕ ಬದಲಾವಣೆಗಳನ್ನ ನೋಡಿದರೆ ಯಾರಿಗಾದರೂ ಸಹಾ ಸೋಜಿಗೆ ಅನಿಸುತ್ತದೆ.ಕಳೆದ 5 ವರ್ಷದ ಹಿಂದೆ ಪೂಜ್ಯ ಸ್ವಾಮೀಜಿಯವರೇ ಪರಿಕಲ್ಪಿಸಿದ "ಮತ್ತೆಕಲ್ಯಾಣ" ಎಂಬ ಸಾಂಸ್ಕೃತಿಕ ಯಾತ್ರೆ ಕರ್ನಾಟಕದ ಇತಿಹಾಸದಲ್ಲೆ ಮೊಟ್ಟ ಮೊದಲು ಎಂದು ಹೇಳಬಹುದು ಎಂದರು.

# ಮತ್ತೆ ಮೋದಿ ಪ್ರಧಾನಿ ಮಾಡೋಣ

» **ಚಿತ್ರದುರ್ಗ**

ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಚಿತ್ರದುರ್ಗ ಕ್ಷೇತ್ರವನ್ನು ಗೆಲ್ಲಲ್ಲೇ ಬೇಕಿದೆ. ಇದಕ್ಕೆ ಈಗಿನಿಂದಲೇ ತಯಾರಿ ಮಾಡಿಕೊಳ್ಳಬೇಕಿದೆ ಎಂದು ಪಕ್ಷದ ಮುಖಂಡರಿಗೆ ಕಾರ್ಯಕರ್ತರಿಗೆ ಮಾಜಿ ಶಾಸಕ ಜಿ.ಎಚ್.ತಿಪ್ಪಾರೆಡ್ಡಿ ಕರೆ ನೀಡಿದರು.

ಚಿತ್ರದುರ್ಗ ನಗರದ ಭಾರತೀಯ ಜನತಾ ಪಾರ್ಟಿಯ ಕಚೇರಿಯಲ್ಲಿ ಶುಕ್ರವಾರ ಹಿರಿಯೂರು ಮತ್ತು ಶಿರಾ ತಾಲ್ಲೂಕಿನ ಜೆಡಿಎಸ್ ಮತ್ತು ಕಾಂಗ್ರೆಸ್‌ನ ಕೆಲ ಮುಖಂಡರು ಬಿಜೆಪಿಯನ್ನು ಸೇರ್ಪಡೆಯ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಮೋದಿಯವರನ್ನು ಮೂರನೇ ಬಾರಿಗೆ ದೇಶದ ಪ್ರಧಾನಿಯನ್ನಾಗಿ ಮಾಡಬೇಕಿದೆ ಇದರ ಹೊಣೆ ನಮ್ಮೆಲ್ಲರ ಮೇಲಿದೆ ಈ ಭಾರಿ ಕಳೆದ ಬಾರಿಗಿಂತ ಹೆಚ್ಚಿನ ಲೋಕಸಬಾ ಸ್ಥಾನವನ್ನು ಗೆಲ್ಲಬೇಕಿದೆ ಇದಕ್ಕೆ ಈಗಿನಿಂದಲೇ ತಯಾರಿಯನ್ನು ಮಾಡಬೇಕಿದೆ.ಈಗಬೇರೆಪಕ್ಷದಿಂದಬಂದು ನಮ್ಮ ಪಕ್ಷವನ್ನು ಸೇರ್ಪಡೆಯಾಗಿರುವುದು ಸಂತೋಷದ ವಿಷಯವಾಗಿದೆ. ಇವರು ಮುಂದಿನ ದಿನಮಾನದಲ್ಲಿ ಪಕ್ಷದ ಗೆಲುವಿಗಾಗಿ ಶ್ರಮವನ್ನು ಹಾಕಬೇಕಿದೆ ಎಂದು ತಿಳಿಸಿದರು.

ಕಳೆದ ಬಾರಿ ಚುನಾವಣೆಯಲ್ಲಿ ನಮ್ಮ ಪಕ್ಷದ ಅಭ್ಯರ್ಥಿಗಳಿಸಿದ ಮತಕ್ಕಿಂತ ಈ ಬಾರಿಯ ಚುನಾವಣೆಯಲ್ಲಿ ಶೇ.10ರಷ್ಟು ಹೆಚ್ಚಿನಪ್ರಮಾಣದಮತವನ್ನುಗಳಿಸಬೇಕಿದೆ. ಇದಕ್ಕೆ ಎಲ್ಲದ ಸಹಕಾರ ಅಗತ್ಯವಾಗಿದೆ. ಕಳೆದ ಬಾರಿ ಚುನಾವಣೆಯಲ್ಲಿ ಒಂದೇ ಜನಾಂಗದವರು ಹಲವಾರು ಜನ ಚುನಾವಣಾ ಕಣದಲ್ಲಿ ಇದಿದ್ದರಿಂದ ನಮಗೆ ಅನುಕೂಲವಾಯಿತು. ಆದರೆ ಈ ಬಾರಿ ಪರಿಸ್ಥಿತಿ ಹಿಂದಿನಂತೆ ಇಲ್ಲ ಈ ಹಿನ್ನಲೆಯಲ್ಲಿ ಚುನಾವಣೆಯಲ್ಲಿ ಶ್ರಮವನ್ನು ಹಾಕಬೇಕಿದೆ ಈಗಿನಿಂದಲೇ ಕಳೆದ 10 ವರ್ಷದಲ್ಲಿ ನರೇಂದ್ರ ಮೋದಿಯವರು ಮಾಡಿದ ವಿವಿಧ ರೀತಿಯ ಸಾಧನೆಗಳನ್ನು ಗ್ರಾಮ ಗ್ರಾಮಗಳಲ್ಲಿಯೂ ತಿಳಿಸಬೇಕಿದೆ. ಈ ಕಾರ್ಯವನ್ನು ಪಕ್ಷದ ಕಾರ್ಯಕರ್ತರು ಮುಖಂಡರು ಮಾಡಬೇಕಿದೆ. ಈ ಚುನಾವಣೆಯಲ್ಲಿ ಟೀಕೇಟ್ ಯಾರೇ ತರಲಿ ನಮ್ಮಗೆ ಅಭ್ಯರ್ಥಿಗಿಂತ ನರೇಂದ್ರ ಮೋದಿಯವರನ್ನು ಮತ್ತೋಮ್ಮೆ ಪ್ರಧಾನಿಯನ್ನಾಗಿ ಮಾಡುವುದು ಮುಖ್ಯವಾಗಿದೆ ಎಂದರು.

ರಾಜ್ಯದಲ್ಲಿ ಆಡಳಿತವನ್ನು ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರ ಜನರಿಗೆ ಏನನ್ನಾದರೂ ನೀಡಬೇಕಾದರೆ ಕೇಂದ್ರದ ಕಡೆ ಕೈತೋರಿಸುತ್ತಿದೆ. ಅಕ್ಕಿಯನ್ನು ಖರೀದಿ ಮಾಡಬೇಕಾದರೂ ವಿದ್ಯುತ್ ಖರೀದಿ ಮಾಡಬೇಕಾದರೂ ಸಹಾ ರಾಜ್ಯ ಸರ್ಕಾರ ಕೇಂದ್ರದ ಕಡೆಗೆ ಕೈ ತೋರಿಸುತ್ತಾ ಅವರು ನೀಡುತ್ತಿಲ್ಲ ಎಂದು ದೂರುತ್ತಿದೆ ಆದರೆ ಸರ್ಕಾರಕ್ಕೆ ನೀಡುವ ಇಚ್ಚಾಶಕ್ತಿ ಇಲ್ಲವಾಗಿದೆ ಇದರಿಂದ ಈ ರೀತಿಯಾದ ನಾಟಕವನ್ನು ಮಾಡುತ್ತಿದ್ದಾರೆ ಎಂದು ತಿಪ್ಪಾರೆಡ್ಡಿ ದೂರಿದರು. ಜೆಡಿಎಸ್ ತೋರಿದು ಬಿಜೆಪಿಯನ್ನು ಸೇರ್ಪಡೆಯಾದ ಮಾಜಿ ಜಿ.ಪಂ. ಸದಸ್ಯರಾದ ದ್ಯಾಮಣ್ಣ ಮಾತನಾಡಿ ನಾನು ಈ ಹಿಂದೆ ಬಿಜೆಪಿಯಲ್ಲಿಯೇ ಇದ್ದೇ ಹಲವಾರು ಕಾರಣದಿಂದ ಜೆಡಿಎಸ್‌ಗೆ ಹೋಗಿದ್ದೆ ಈಗ ಮೋದಿಯವರ ಕಾರ್ಯ ವೈಖರಿಯನ್ನು ಮೆಚ್ಚಿ ಮರಳಿ ಬಿಜೆಪಿಗೆ ಬಂದಿದ್ದೇನೆ. ನನ್ನ ಕ್ಷೇತ್ರದ 284 ಬೂತ್‌ಗಳಲ್ಲಿಯೂನ ಸಹಾ ಮುಂದಿನ ಲೋಕಸಭಾ ಚುನಾವಣೆಯಲ್ಲಿ ಲೀಡ್ ನೀಡಲಾಗುವುದು, ಅಲ್ಲದೆ ನಮ್ಮ ಪಕ್ಷದ ಅಭ್ಯರ್ಥಿ ಹೆಚ್ಚಿನ ಮತಗಳ ಅಂತರದಿಂದ ಗೆಲುವನ್ನು ಸಾಧಿಸಲು ಈಗಿನಿಂದಲೇ ಶ್ರಮವನ್ನು ಹಾಕುವುದಾಗಿ ತಿಳಿಸಿದರು.

ಜಿಲ್ಲಾ ಬಿಜೆಪಿ ಅಧ್ಯಕ್ಷ ಮುರಳಿ ಅಧ್ಯಕ್ಷತೆಯನ್ನು ವಹಿಸಿದ್ದರು. ಕಾರ್ಯಕ್ರಮದಲ್ಲಿ ಗ್ರಾಮಾಂತರ ಅಧ್ಯಕ್ಷ ಕಲ್ಲೇಶಯ್ಯ, ಸಂಪತ್ ಕುಮಾರ್, ನಗರಾಭೀವೃದ್ದಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಸುರೇಶ್ ಸಿದ್ದಾಪುರ, ಹಿರಿಯೂರು ಮಂಡಲಅಧ್ಯಕ್ಷಶಿವಣ್ಣಜಿಲ್ಲಾಕಾರ್ಯದರ್ಶಿ ಮೋಹನ್, ವಕ್ತಾರ ಶಿವಪ್ರಕಾಶ್ ದಗ್ಗೆ, ಸೇರಿದಂತೆ ಇತರರು ಉಪಸ್ಥಿತರಿದ್ದರು. ಈ ಸಂದರ್ಭದಲ್ಲಿ ದ್ಯಾಮಣ್ಣರವರ ಜೊತೆಯಲ್ಲಿ ರವಿವರ್ಮ, ಸೋಮಣ್ಣ, ಶೇಖರಪ್ಪ, ರಂಗನಾಥ್, ರುದ್ರೇಶ್ ಬಿಜೆಪಿಯನ್ನು ಸೇರ್ಪಡೆಯಾದರು.



## ಫಾಸ್ಟ್ ನ್ಯೂಸ್

### ಮತ್ಸಮುದ್ರ ಶ್ರೀಆಂಜನೇಯಸ್ವಾಮಿ ಹುಂಡಿಯಲ್ಲಿ 1.70 ಲಕ್ಷ ಹಣ ಸಂಗ್ರಹ



» **ಚಳ್ಳಕೆರೆ**

ತಾಲ್ಲೂಕಿನ ಪರಶುರಾಮಪುರ ಹೋಬಳಿಯ ಮುಜರಾಯಿ ಇಲಾಖೆಯ ಮತ್ಸಮುದ್ರ ಶ್ರೀಆಂಜನೇಯಸ್ವಾಮಿ(ವ್ಯಾಸರಾಯ ಸ್ಥಾಪಿತ) ಹುಂಡಿಯನ್ನು ಏಣಿಕೆ ಮಾಡಲಾಯಿತು ಎಂದು ಕಂದಾಯಾಧಿಕಾರಿ ರಾಜೇಶ್ ತಿಳಿಸಿದರು. ಅವರು, ಈ ಬಗ್ಗೆ ಮಾಹಿತಿ ನೀಡಿ, ತಹಶೀಲ್ದಾರ್ ಮಾರ್ಗದರ್ಶನದಲ್ಲಿ ದೇವಸ್ಥಾನದ ವ್ಯವಸ್ಥಾಪಕರು, ಗ್ರಾಮಸ್ಥರು ಹಾಗೂ ಭಕ್ತರ ಸಮ್ಮುಖದಲ್ಲಿ ಹುಂಡಿಹಣವನ್ನು ಏಣಿಕೆ ಮಾಡಲಾಗಿದೆ. 1.70 ಲಕ್ಷ ಹಣ ಹುಂಡಿಯಲ್ಲಿ ಸಂಗ್ರಹವಾಗಿದ್ದು, ಹಣವನ್ನು ಇಲ್ಲಿನ ಎಸ್‌ಬಿಐ ಶಾಖೆಯಲ್ಲಿ ಜಮಾಮಾಡಲಾಗಿದೆ. ಗ್ರಾಮ ಆಡಳಿತಾಧಿಕಾರಿಗಳಾದ ಬಸವರಾಜು, ಕಾಡೇಶ್, ಸಿದ್ದರಾಮಶೆಟ್ಟಿ, ಶ್ರೀಆಂಜನೇಯಸ್ವಾಮಿ ದೇವಸ್ಥಾನದ ಆರ್ಚಕರಾದ ಸುದೀಂದ್ರರಾವ್, ದೇವಸ್ಥಾನ ರುದ್ರಪ್ಪ, ಮಂಜಣ್ಣ, ಅಂಜಿನಿ, ನಿರಂಜನಮೂರ್ತಿ, ಉಮೇಶಪ್ಪ, ಎಂ.ಜೆ. ಕಂಠಪ್ಪ, ಎಂ.ಸಿ.ಪುಟ್ಟಯ್ಯ, ಯರ್ರಬೀಸಪ್ಪ, ಕರಿಯಣ್ಣ, ಈ.ಅನಿಲ್‌ಕುಮಾರ್, ಸದಸ್ಯರಾದ ಎಂ.ಎ.ತಿಪ್ಪೇಸ್ವಾಮಿ,ಎನ್.ರಾಘವೇಂದ್ರ,ಜಯಮ್ಮ, ರಾಜಮ್ಮ ಮುಂತಾದವರು ಉಪಸ್ಥಿತರಿದ್ದರು.

### ವಚನಕಾರರು ಸಮಾಜದ ಶಾಶ್ವತ ಆಸ್ತಿ



» **ಪರಶುರಾಂಪುರ**

ಶಿವ ಶರಣರು, ವಚನಕಾರರು ಸಮಾಜದ ಶಾಶ್ವತ ಆಸ್ತಿ. ಸಾಮಾಜಿಕ ಅಸಮಾನತೆ ಹೋಗಲಾಡಿಸುವ ಜತೆಗೆ ಜ್ಞಾನ ವಿಸ್ತರಣೆಗೆ ಅವರು ನೀಡಿದ ಕೊಡುಗೆ ಮಹತ್ತರವಾದುದು ಎಂದು ಎಪಿಎಂಸಿ ಮಾಜಿ ಅಧ್ಯಕ್ಷ ಚೆನ್ನಕೇಶವ ತಿಳಿಸಿದರು. ಇಲ್ಲಿನ ಗ್ರಾಪಂ ಆವರಣದ ಸಭಾಂಗಣದಲ್ಲಿ ಗುರುವಾರ ಆಯೋಜಿಸಿದ್ದ ಮಡಿವಾಳ ಮಾಚಿದೇವ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದರು. ವಿಶಾಲ ಮನೋಧರ್ಮ ಮಡಿವಾಳ ಸಮುದಾಯದ ಜನರಲ್ಲಿದೆ. ಶಿವಶರಣ ಮಾಚಿದೇವರ ಮಾರ್ಗದರ್ಶನದಿಂದ ಮುನ್ನಡೆಯುತ್ತಿರುವುದೇ ಇದಕ್ಕೆ ಕಾರಣ. ಮಾಚಿದೇವ ಸಮಾಜದ ಕೊಳಕು ತೊಳೆದು ಹಾಕಿದವರು. ಸಮಾಜಕ್ಕೆ ಮಾಚಿದೇವರ ಸಂದೇಶ ಆದರ್ಶವಾಗಬೇಕು ಎಂದರು. ಕೃಷಿ ಅಧಿಕಾರಿ ಜೀವನ್ ಮಾತನಾಡಿ, ಮೌಢ್ಯಗಳಿಂದ ದೀನರ ಶೋಷಣೆ ನಡೆಯುತ್ತಿದ್ದ ಕಾಲದಲ್ಲಿ ಮಾಚಿದೇವ ಜಾಗೃತಿಯ ಮೂಲಕ ಶೋಷಣೆ ತಡೆಗಟ್ಟಿದರು. ಕಷ್ಟಗಳನ್ನು ಸಹಿಸಿಯೂ ಬಡ ಜನರ ಉದ್ಧಾರಕ್ಕೆ ಮಾರ್ಗದರ್ಶಕರಾದರು ಎಂದರು.ಪಿಡಿಓ ಗುಂಡಪ್ಪ ಮಾತನಾಡಿ, ‘ಮಾಚಿದೇವ ಸಮಾಜದ ಶ್ರೇಷ್ಠ ವಚನಕಾರರಲ್ಲಿ ಒಬ್ಬರು’ ಎಂದರು. ಗ್ರಾಪಂ ಅಧ್ಯಕ್ಷ ಜಗಲೂರುಸ್ವಾಮಿ,ಸದಸ್ಯರಾದ ರುದ್ರೇಶ್, ನಾಗಭೂಷಣ್, ಮುಖಂಡರಾದ ನಿಜಲಿಂಗಪ್ಪ, ಈಶ್ವರಪ್ಪ, ಚನ್ನರಾಯಪ್ಪ,ಸೋಮಣ್ಣ,ನಾಗರಾಜು, ಕೆಂಚಣ್ಣ, ಮಹಾಂತೇಶ್ ಗ್ರಾಮಸ್ಥರಿದ್ದರು.

### ಮೀರಸಾಬಿಹಳ್ಳಿ ಶಿವಣ್ಣ ಸೇನಾ ಪಡೆಯ ಅಧ್ಯಕ್ಷ, ಕಾರ್ಯದರ್ಶಿಯಾಗಿ ಬಸವರಾಜ್ ಆಯ್ಕೆ

» **ಹೊಸದುರ್ಗ**

ರಾಜ್ಯ ಶ್ರೀ ವೀರ ಮಡಿವಾಳ ಮಾಚಿದೇವ ಯುವ ಸೇನಾಪಡೆಯ ನೂತನ ಅಧ್ಯಕ್ಷರಾಗಿ ಮೀರಸಾಬಿಹಳ್ಳಿ ಶಿವಣ್ಣ, ಹಾಗು ಪ್ರಧಾನ ಕಾರ್ಯದರ್ಶಿಯಾಗಿ ಸ್ಟುಡಿಯೋ ಬಸವರಾಜ್ ಇವರುಗಳನ್ನ ಪಟ್ಟಣದಲ್ಲಿ ಗುರುವಾರ ನಡೆದ ಮಹತ್ವದ ಸಭೆಯಲ್ಲಿ ಆಯ್ಕೆ ಮಾಡಲಾಯಿತು ಎಂದು ಸೇನಾ ಪಡೆಯ ಸಂಸ್ಥಾಪಕ ಅಧ್ಯಕ್ಷ ನಾಗತಿಹಳ್ಳಿಮಂಜುನಾಥ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಮುಂದಿನ ದಿನಗಳಲ್ಲಿ ನಾಗತಿಹಳ್ಳಿಮಂಜುನಾಥ್ ಅವರ ನೇತೃತ್ವದಲ್ಲಿ ಕಾರ್ಯಕಾರಿ ಸಮಿತಿಯನ್ನ ರಚನೆ ಮಾಡಿ ಸಮಾಜ ಮುಖಿಯಾದ ಕಾರ್ಯಕ್ರಮಗಳನ್ನ ಆಯೋಜಿಸುವುದರ ಮೂಲಕ ಸಮಾಜವನ್ನ ಜಾಗೃತಗೊಳಿಸುವುದು ಹಾಗೂ ನಮ್ಮ ಮಡಿವಾಳ ಸಮಾಜವನ್ನ ಮುಖ್ಯ ವಾಹಿನಿಗೆ ತರುವ ಕೆಲಸವನ್ನ ಮಾಡಲಾಗುವುದು ಮೀಸಲಾತಿ ಪಡೆಯುವ ಸಲುವಾಗಿ ಸಮಾಜದ ಜನರಲ್ಲಿ ಜಾಗೃತಿ ಗೊಳಿಸುವ ಕೆಲಸವನ್ನ ಮಾಡಲಾಗುವುದು ಎಂದು ತಿಳಿಸಿದರು.

# ಟ್ರ್ಯಾಕ್ಟರ್‌ಗೆ ಡಿಕ್ಕಿ ಹೊಡೆದ ಮದುವೆ ದಿಬ್ಬಣದ ಕೆಎಸ್‌ಆರ್‌ಟಿಸಿ ಬಸ್: 30ಕ್ಕೂ ಹೆಚ್ಚು ಜನರಿಗೆ ಗಾಯ





» **ಚಳ್ಳಕೆರೆ**

ಮದುವೆ ಸಮಾರಂಭವನ್ನು ಮುಗಿಸಿಕೊಂಡು ವಾಪಾಸ್ ಹೋಗುವ ಸಂದರ್ಭದಲ್ಲಿ ಒಪ್ಪಂದಪಡೆದಿದ್ದ ಕೆಎಸ್‌ಆರ್‌ಟಿಸಿ ಬಸ್ ಚಾಲಕ ನಿಯಂತ್ರಣ ತಪ್ಪಿ ಟ್ರ್ಯಾಕ್ಟರ್‌ಗೆ ಡಿಕ್ಕಿ ಹೊಡೆದು ರಸ್ತೆಬದಿಯ ಕಂದಕಕ್ಕೆ ಬಿದ್ದ ಪರಿಣಾಮ ಬಸ್‌ನಲ್ಲಿದ್ದ ಸುಮಾರು 30ಕ್ಕೂ ಹೆಚ್ಚು ಜನರಿಗೆ ಗಾಯಗಳಾಗಿವೆ. ತಾಲ್ಲೂಕಿನ ತಳಕು ಪೊಲೀಸ್ ಠಾಣಾ ವ್ಯಾಪ್ತಿಯ ಚಿಕ್ಕಹಳ್ಳಿ ಗೇಟ್‌ಬಳಿ ಈ ಅಪಘಾತ ಸಂಭವಿಸಿದ್ದು, ಮದುವೆ ಒಪ್ಪಂದ ಪಡೆದ ಕೆಎಸ್‌ಆರ್‌ಟಿಸಿ ಬಸ್ ಮದುವೆಗೆ ಆಗಮಿಸಿದ್ದ ಜನರನ್ನು ಕರೆದುಕೊಂಡು ಕಲ್ಬುರ್ಗಿಯಿಂದ ಮಾಗಡಿಗೆ ತಲುಪಬೇಕಿದ್ದು,





ಫೆ.2ರ ಶುಕ್ರವಾರ ಬೆಳಗಿನ ಜಾವ 5ರ ಸಮಯದಲ್ಲಿ ಅತಿವೇಗವಾಗಿ ಬಂದ ಕೆಎಸ್‌ಆರ್‌ಟಿಸಿ ಬಸ್ ಇಟ್ಟಿಗೆ ಏರಿಕೊಂಡು ಸಾಗುತ್ತಿದ್ದ ಟ್ರ್ಯಾಕ್ಟರ್‌ಗೆ ಡಿಕ್ಕಿ ಪಡಿಸಿ, ಕಂದಕಕ್ಕೆ ಉರುಳಿದೆ. ಚಾಲಕ ಅಜಾಗರೂಕತೆಯೇ ಅಪಘಾತ ಕಾರಣ ಎನ್ನಲಾಗಿದೆ. ಸದರಿ ಅಪಘಾತದಲ್ಲಿ ಮಾಗಡಿ ಮೂಲಕ ಲೋಕೇಶ್(31), ಭಾಗ್ಯಲಕ್ಷ್ಮಿ(34) ಜಂಬ್ರಾವ್(48), ಪಾಪಣ್ಣ(60), ಸಕ್ರಿಬಾಯಿ(70), ತಾಳಕೇರಪ್ಪ(68), ಪುಟ್ಟರಂಗನಾಯ್ಕ(61), ಶಂಕರ್(35), ಕೃಷ್ಣಬಾಯಿ(35), ಶರಣ ಸಂಗಪ್ಪ(38), ಲಕ್ಷ್ಮಿ ಬಾಯಿ(38), ಸರೋಜಬಾಯಿ(47) ಸೇರಿದಂತೆ ಒಟ್ಟು 30ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ. ಬಸ್‌ಚಾಲಕ ಬಸವರಾಜ ಜಿ.ಕಂಬಾರ(35) ಗಾಯಾಳುವಾಗಿದ್ದು, ಈತನ ಮೇಲೆ ಪ್ರಕರಣ ದಾಖಲು ಮಾಡಲಾಗಿದೆ. ತಳಕು ಠಾಣಾ ವೃತ್ತ ನಿರೀಕ್ಷಕ ಕೆ.ಸಮೀವುಲ್ಲಾ, ಪಿಎಸ್‌ಐ ಲೋಕೇಶ್, ಗಾದಿಲಿಂಗ ಘಟನೆ ನಡೆದ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

# ಬಲಿಷ್ಠರೇ ಮೀಸಲಾತಿ ಕೇಳುತ್ತ ಇರುವುದು ಬೇಸರ: ಮಾದಾರ ಶ್ರೀ



» **ಹೊಸದುರ್ಗ**

ಮೀಸಲಾತಿ ಕೇಳಬೇಕಾದವರು ಸುಮ್ಮನಿದ್ದಾರೆ. ಆದರೆ, ಇಂದು ಉಳ್ಳವರೇ ಮತ್ತು ಬಲಿಷ್ಠರೇ ಮೀಸಲಾತಿ ಕೇಳುತ್ತಿರುವುದು ಬೇಸರದ ವಿಷಯ. ಸಮುದಾಯಗಳು ಮುನ್ನೆಲೆಗೆ ಬರಬೇಕಾದರೆ, ಶಿಕ್ಷಣ ಮತ್ತು ದಾಸೋಹ ಮುಖ್ಯವಾಗಿ ಬೇಕಿದೆ. ಮೀಸಲಾತಿಗಾಗಿ ಉಳ್ಳವರು ಮತ್ತು ಬಡವರ ನಡುವೆ ದೊಡ್ಡ ಕಂದಕವಿದೆ ಎಂದು ಮಾದಾರ ಚೆನ್ನಯ್ಯ ಗುರುಪೀಠದ ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿ ಆತಂಕ ವ್ಯಕ್ತಪಡಿಸಿದರು.

ತಾಲ್ಲೂಕಿನ ಸಾಣೇಹಳ್ಳಿಯಲ್ಲಿ ಶುಕ್ರವಾರ ’ ಅಂತರ್ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ’ ಅಂಗವಾಗಿ ಆಯೋಜಿಸಿದ್ದ ’ಮಠಗಳ ಧಾರ್ಮಿಕ, ಸಾಹಿತ್ಯಕ, ಸಾಂಸ್ಕೃತಿಕ ಕೊಡುಗೆ’ ಗೋಷ್ಠಿಯಲ್ಲಿ ಭಾಗವಹಿಸಿ ಮಾತನಾಡಿದರು.ಹಸಿವಿದ್ದಲ್ಲಿ ಅನುಭವ ಹುಟ್ಟಿಕೊಳ್ಳುತ್ತದೆ. ಮಠಗಳು ಅಸಮಾನತೆಯನ್ನು ತೊಡೆದು ಹಾಕಲು ಹುಟ್ಟಿಕೊಂಡಿವೆ. ಈ ನಿಟ್ಟಿನಲ್ಲಿ ಸಾಣೇಹಳ್ಳಿ ಮಠ ನಾಟಕಗಳ ಮೂಲಕ ಅಂತರರಾಷ್ಟ್ರೀಯ ಮಟ್ಟದಲ್ಲಿ ಹೆಸರಾಗಿದೆ. ಎಲ್ಲಾ ಮಠಾಧೀಶರಿಗೆ ಇಲ್ಲಿ ಅನಿಸಿಕೆ ವ್ಯಕ್ತಪಡಿಸಲು ಅಭಿವ್ಯಕ್ತಿ ಸ್ವಾತಂತ್ರ್ಯವಿದೆ ಎಂದರು. ’ಜಿಲ್ಲೆಯಲ್ಲಿ ತರಳಬಾಳು ಶ್ರೀಮಠ ಹಾಗೂ ಮುರುಘಾಮಠಗಳು ಸಾಹಿತ್ಯಕ್ಕೆ ನೀಡಿರುವ ಕೊಡುಗೆ ಅಪಾರ. ಮಠಾಧೀಶರು ಅಂಕಣಗಳ ಮೂಲಕ ಸರಳ ಭಾಷೆಯಲ್ಲಿ ಜನರಿಗೆ ತಿಳುವಳಿಕೆ ನೀಡುವುದರ ಮೂಲಕ ಜಿಲ್ಲೆಯಲ್ಲಿರುವ ಜನರನ್ನು ಜಾಗೃತರನ್ನಾಗಿಸಿದ್ದಾರೆ ಎಂದು ಚಿಕ್ಕಮಗಳೂರಿನ ಬಸವತತ್ವ ಪೀಠದ ಬಸವ ಮರುಳಸಿದ್ಧ ಸ್ವಾಮೀಜಿ ಹೇಳಿದರು.ಈ ವೇಳೆ ಕಾರ್ಯಕ್ರಮದಲ್ಲಿ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ, ಭಗೀರಥ ಗುರುಪೀಠದ ಶ್ರೀ ಪುರುಷೋತ್ತಮಾನಂದಪುರಿ ಸ್ವಾಮೀಜಿ, ಕುಂಚಿಟಿಗ ಮಠದ ಶಾಂತವೀರ ಸ್ವಾಮೀಜಿ ಮತ್ತು ಸಾಹಿತಿ ಚಟ್ನಳ್ಳಿ ಮಹೇಶ್ ಸೇರಿದಂತೆ ಇತರ ಮುಖಂಡರು ಹಾಗೂ ನೂರಾರು ಸಾಹಿತ್ಯಕ್ತರು ಇದ್ದರು.

## ಪ್ರಮುಖ ಸುದ್ದಿ

### ಜಾತ್ರೆಗೆ ಆಗಮಿಸುವ ಭಕ್ತಾಧಿಗಳಿಗೆ ಎಲ್ಲಾ ಮೂಲಭೂತ ಸೌಕರ್ಯ ಒದಗಿಸಲು, ಮೇಲುಸ್ತುವಾರಿಗೆ ಅಧಿಕಾರಿಗಳ ತಂಡ ನೇಮಕ;

# ರಾಜನಹಳ್ಳಿಯಲ್ಲಿ ಫೆ.8,9 ರಂದು ವಾಲ್ಮೀಕಿ ಜಾತ್ರೆ

» **ದಾವಣಗೆರೆ**

ಹರಿಹರ ತಾಲ್ಲೂಕಿನ ರಾಜನಹಳ್ಳಿಯ ಶ್ರೀ ಮಹರ್ಷಿ ವಾಲ್ಮೀಕಿ ಗುರುಪೀಠದಲ್ಲಿ ಫೆಬ್ರವರಿ 8 ಮತ್ತು 9 ರಂದು ವಾಲ್ಮೀಕಿ ಜಾತ್ರೆ ನಡೆಯಲಿದ್ದು ಜಾತ್ರೆಯನ್ನು ತುಂಬಾ ಅಚ್ಚುಕಟ್ಟಾಗಿ ಮತ್ತು ವ್ಯವಸ್ಥಿತವಾಗಿ ನಡೆಸಿಕೊಡಲು ಎಲ್ಲಾ ಇಲಾಖೆ ಅಧಿಕಾರಿಗಳು ಜವಾಬ್ದಾರಿಯಿಂದ ಕೆಲಸ ಮಾಡಬೇಕೆಂದು ಜಿಲ್ಲಾಧಿಕಾರಿ ಡಾ: ವೆಂಕಟೇಶ್ ಎಂ.ವಿ ತಿಳಿಸಿದರು.

ಅವರು ಶುಕ್ರವಾರ ರಾಜನಹಳ್ಳಿಯ ಮಹರ್ಷಿ ವಾಲ್ಮೀಕಿ ಗುರುಪೀಠದಲ್ಲಿ ನಡೆದ ಜಾತ್ರಾ ಪೂರ್ವಭಾವಿ ಸಿದ್ದತಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಜಾತ್ರಾ ಮಹೋತ್ಸವದಲ್ಲಿ ಮಾನ್ಯ ಮುಖ್ಯಮಂತ್ರಿಯವರು ಸೇರಿದಂತೆ ಸಚಿವರು ಮತ್ತು ವಿವಿಧ ಗಣ್ಯಮಾನ್ಯರು ಭಾಗವಹಿಸಲಿದ್ದಾರೆ. ಜಾತ್ರೆಗೆ ರಾಜ್ಯ ವಿವಿಧ ಜಿಲ್ಲೆಗಳಿಂದ ಭಕ್ತಾಧಿಗಳು ಇಲ್ಲಿಗೆ ಆಗಮಿಸುವರು.

ಜಾತ್ರಾ ಸಂದರ್ಭದಲ್ಲಿ 3 ಲಕ್ಷಕ್ಕಿಂತಲೂ ಹೆಚ್ಚಿನ ಜನರು ಇಲ್ಲಿ ಸೇರುವುದರಿಂದ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮುನ್ನೆಚ್ಚರಿಕೆ ವಹಿಸುವ ಜೊತೆಗೆ ಇಲ್ಲಿ ಅಗತ್ಯವಿರುವ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಬೇಕಾಗಿದೆ.



ಕುಡಿಯುವ ನೀರು; ಶ್ರೀ ಮಠದಲ್ಲಿ ನಾಲ್ಕು ಕೊಳವೆಬಾವಿಗಳಿದ್ದು ಇದರೊಂದಿಗೆ ಹೆಚ್ಚುವರಿಯಾಗಿ ಟ್ಯಾಂಕರ್‌ಗಳನ್ನು ಒದಗಿಸಿ ನಿರಂತರವಾಗಿ ನೀರಿನ ಪೂರೈಕೆ ಮಾಡಲು ಗ್ರಾಮೀಣ ಕುಡಿಯುವ ನೀರು ಪೂರೈಕೆ ವಿಭಾಗದಿಂದ ವ್ಯವಸ್ಥೆ ಮಾಡಬೇಕು ಮತ್ತು ಗ್ರಾಮ ಪಂಚಾಯಿತಿಗಳ ಅಭಿವೃದ್ಧಿ ಅಧಿಕಾರಿಗಳನ್ನು ಕುಡಿಯುವ ನೀರಿನ ಪೂರೈಕೆ ಉಸ್ತುವಾರಿಗಾಗಿ ನೇಮಕ ಮಾಡಲು ತಾ.ಪಂ.ಕಾರ್ಯನಿರ್ವಾಹಕ ಅಧಿಕಾರಿಗೆ ಸೂಚನೆ ನೀಡಿದರು.

ನಿರಂತರ ವಿದ್ಯುತ್; ಫೆ.8 ಮತ್ತು 9 ರಂದು ಜಾತ್ರೆ ನಡೆಯಲಿದ್ದು ಜಾತ್ರಾ ಪೂರ್ವದಲ್ಲಿ ಮತ್ತು ಜಾತ್ರಾ ಸಂದರ್ಭದಲ್ಲಿ ಬೆಸ್ಕಾಂನಿಂದ ನಿರಂತರ ವಿದ್ಯುತ್ ಪೂರೈಕೆಗೆ ಕ್ರಮ ಕೈಗೊಳ್ಳಬೇಕು. ಭಕ್ತಾಧಿಗಳು ಇಲ್ಲಿಗೆ ರಾತ್ರಿ ಸಮಯದಲ್ಲಿಯು ಬರುವುದರಿಂದ ನಿರಂತರ ವಿದ್ಯುತ್ ಪೂರೈಕೆ ಮಾಡುವ ಮೂಲಕ ಸುಗಮವಾಗಿ ನಡೆಯುವಂತೆ ಕ್ರಮ ಕೈಗೊಳ್ಳಲು ಬೆಸ್ಕಾಂ ಇಂಜಿನಿಯರ್‌ಗೆ ತಿಳಿಸಿದರು.

ಆರೋಗ್ಯ ಇಲಾಖೆ; ಹೆಚ್ಚು ಜನರು ಭಾಗವಹಿಸುತ್ತಿರುವುದರಿಂದ ಆರೋಗ್ಯ ಶಿಬಿರದ ಜೊತೆಗೆ ಸ್ಟಾಲ್‌ಗಳನ್ನು ಹಾಕುವ ಮೂಲಕ ತುರ್ತು ಚಿಕಿತ್ಸೆಯ ಜೊತೆಗೆ ಆಗಮಿಸುವ ಜನರಿಗೆ ಆರೋಗ್ಯದ ಶಿಕ್ಷಣವನ್ನು ನೀಡಲು ಕ್ರಮ ಕೈಗೊಳ್ಳಲು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಿಗೆ ತಿಳಿಸದರು.

ಸಾರಿಗೆ; ರಾಜನಹಳ್ಳಿಗೆ ಆಗಮಿಸಲು ಭಕ್ತಾಧಿಗಳಿಗೆ ಯಾವುದೇ ತೊಂದರೆಯಾಗದಂತೆ ಹೆಚ್ಚುವರಿಯಾಗಿ ಹರಿಹರದಿಂದ ಕೆ.ಎಸ್.ಆರ್.ಟಿ.ಸಿ. ಬಸ್ ವ್ಯವಸ್ಥೆ ಕಲ್ಪಿಸಲು ನಿಗಮದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಬಂದೋಬಸ್ತ್; ಜಾತ್ರೆಯಲ್ಲಿ ಲಕ್ಷಾಂತರ ಜನರು ಆಗಮಿಸುವುದರಿಂದ ಇಲ್ಲಿ ಸಂಚಾರ ದಟ್ಟಣೆ ಹೆಚ್ಚಬಹುದು ಮತ್ತು ಕಾರ್ಯಕ್ರಮದ ವೇಳೆ ಜನಸಂದಣಿಯಾಗದಂತೆ ಸೂಕ್ತ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಕಲ್ಪಿಸಬೇಕು. ಮುಖ್ಯಮಂತ್ರಿಗಳು ಬಂದು ಹೋದ ನಂತರ ಬಂದೋಬಸ್ತ್ ಕಡಿಮೆಯಾಗಿ ಈ ಹಿಂದೆ ಸಮಸ್ಯೆಯಾಗಿತ್ತು ಎಂದು ಮಠದ ಧರ್ಮದರ್ಶಿಯವರು ಪ್ರಸ್ತಾಪಿಸಿದಾಗ ಜಾತ್ರೆ ಮುಗಿಯುವವರೆಗೂ ಬಂದೋಬಸ್ತ್ ಕೈಗೊಂಡು ಯಾವುದೇ ಅಹಿತಕರ ಘಟನೆ ನಡೆಯದಂತೆ ಪೊಲೀಸ್ ಇಲಾಖೆಯಿಂದ ಕ್ರಮ ವಹಿಸಲು ತಿಳಿಸಿದರು.

ಪ್ರಸಾದ; ಜಾತ್ರೆಗೆ ಆಗಮಿಸುವ ಭಕ್ತಾಧಿಗಳಿಗೆ ಇಲಾಖೆಯಿಂದ ಪ್ರಸಾದ ವ್ಯವಸ್ಥೆ ಕೈಗೊಳ್ಳಲಾಗುತ್ತಿದ್ದು ಆಗಮಿಸುವ ಎಲ್ಲಾ ಭಕ್ತರಿಗೆ ಸಕಾಲದಲ್ಲಿ ಪ್ರಸಾದ ವ್ಯವಸ್ಥೆ ಮಾಡಲು ಮತ್ತು ಹೆಚ್ಚುವರಿಯಾಗಿ ತಟ್ಟೆಗಳನ್ನಿಟ್ಟುಕೊಂಡು ಊಟದಲ್ಲಿ ಯಾವುದೇ ತರಹದ ವ್ಯತ್ಯಯವಾಗದಂತೆ ನೋಡಿಕೊಳ್ಳಲು ಮತ್ತು ಪ್ರಸಾದ ವಿತರಣೆಗಿಂತ ಮೊದಲು ಆರೋಗ್ಯ ಇಲಾಖೆಯಿಂದ ಸಂಪೂರ್ಣ ತಪಾಸಣೆ ಮಾಡಲು ಸೂಚನೆ ನೀಡಿದರು.

ಸ್ವಚ್ಚತೆ; ಮಠದ ಆವರಣದಲ್ಲಿಯುವ ಶೌಚಾಲಯಗಳ ಜೊತೆಗೆ ಮೊಬೈಲ್ ಶೌಚಾಲಯಗಳನ್ನು ಹೆಚ್ಚುವರಿಯಾಗಿ ಅಳವಡಿಸಲು ತಿಳಿಸಿದ ಜಿಲ್ಲಾಧಿಕಾರಿಯವರು ಜಾತ್ರಾ ವೇಳೆ ಮತ್ತು ಜಾತ್ರೆ ಮುಗಿದ ನಂತರ ಹರಿಹರ ನಗರಸಭೆಯಿಂದ ಸ್ವಚ್ಚತೆ ಮಾಡುವಂತೆ ಸೂಚನೆ ನೀಡಿದರು.

## ಫಾಸ್ಟ್ ನ್ಯೂಸ್

### ತಾಲೂಕು ಆಡಳಿತದಿಂದ ಮಡಿವಾಳ ಮಾಚಿದೇವ ಜಯಂತಿ



» **ಹೊಸದುರ್ಗ**

12 ನೇ ಶತಮಾನದಲ್ಲಿ ಧ್ವನಿ ಎತ್ತಿದವರು ಎಂದರೆ ಅದು ವಚನಕಾರರು, ಸಮಾಜವನ್ನ ಸಮ ಸಮಾನತೆಯ ನಿಟ್ಟನಲ್ಲಿ ತಿದ್ದುವಂತ ಕೆಲಸವನ್ನ ವಚನಕಾರರು ಮಾಡಿದ್ದಾರೆ. ವ್ಯಕ್ತಿಯ ಬಟ್ಟೆಗಳನ್ನು ಶುದ್ದ ಗೊಳಿಸುವುರ ಜೋತೆಗೆ ವ್ಯಕ್ತಿಯ ಮನಸ್ಸನ್ನು ಕೂಡ ಶುದ್ದ ಗೊಳಿಸುವಂತಹ ಸಮಾಜ ಎಂದರೆ ಅದು ಮಡಿವಾಳ ಸಮಾಜ ಮಾತ್ರ ಎಂದು ತಹಶಿಲ್ದಾರ್ ತಿರುಪತಿಪಾಟೀಲ್ ತಿಳಿಸಿದರು.

ಪಟ್ಟಣದ ತಾಲೂಕು ಕಛೇರಿಯ ಸಭಾಂಗಣದಲ್ಲಿ ತಾಲೂಕು ಆಡಳಿದಿಂದ ಗುರುವಾರ ಆಯೋಜಿಸಲಾಗಿದ್ದ ವಚನಗಳ ಸಂರಕ್ಷಕ ಶ್ರೀ ವೀರ ಮಡಿವಾಳ ಮಾಚಿದೇವ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.ಬಟ್ಟೆ ತೊಳೆಯುವುದು ಕೂಡ ಕಾಯಕದ ಪುಣ್ಯದ ಕೆಲಸವಾಗಿದೆ. 12 ನೇ ಶತಮಾನದ ಶಿವಶರಣರ ಮಾಚಿದೇವರ ಕಾಲದಲ್ಲಿ ಮನಸ್ಸಿಗೆ ಅಂಟಿದ್ದ ಮಲಿನವನ್ನ ತೊಳೆಯುವಂತಹ ಕೆಲಸವನ್ನ ಮಾಡಿದವರು 12 ನೇ ಶತಮಾನದ ಅಗ್ರಗಣ್ಯ ವಚನಕಾರರಲ್ಲಿ ಒಬ್ಬರಾದ ಶ್ರೀ ಮಡಿವಾಳ ಮಾಚಿದೇವರು.ದೊಡ್ಡ ದೊಡ್ಡ ಹುದ್ದೆಗಳಳಲ್ಲಿ ಇರುವವರಿಗೆ ಎಷ್ಟು ಗೌರವವಿದೆಯೋ ಅಷ್ಟೇ ಗೌರವ ಬಟ್ಟೆ ತೊಳೆಯುವ ಕಾಯಕ ಮಾಡುವವರಿಗೂ ಇದೆ ಎಂದು ವಚನಗಳಲ್ಲಿ ಹೇಳಿದ್ದಾರೆ. ವಚನಕಾರರು ಬಿಟ್ಟು ಹೋಗಿರುವ ಬಹು ಅಮೂಲ್ಯವಾದ ವಚನಗಳು ನಮ್ಮ ಬದುಕಿಗೆ ದಾರಿದೀಪವಾಗಿವೆ ಎಂದರುತಾಲೂಕು ಶ್ರೀ ವೀರ ಮಡಿವಾಳ ಮಾಚಿದೇವ ಸಂಘದ ಅಧ್ಯಕ್ಷ ಬಿ.ಆರ್.ರಾಮಕೃಷ್ಣಪ್ಪ ಮಾಚಿದೇವ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಕಾರ್ಯಕ್ರಮವನ್ನ ಉದ್ಘಾಟಿಸಿದರು.ಶ್ರೀರಾಂಪುರ ಹೋಬಳಿ ಸಂಘದ ಅಧ್ಯಕ್ಷ ಬಿ.ಲೋಕೇಶಪ್ಪ “ಶ್ರೀ ವೀರ ಮಡಿವಾಳ ಮಾಚಿದೇವರ ಜೀವನ ಚರಿತ್ರೆ” ಕುರಿತಂತೆ ಮಾತನಾಡಿದರು. ಕಾರ್ಯಕ್ರಮದಲ್ಲಿ ಬಿಸಿಎಂ ಅಧಿಕಾರಿ ಶಶಿಧರ್, ಸಮಾಜಕಲ್ಯಾಣ ಇಲಾಖೆಯ ಅಧಿಕಾರಿ ಶ್ರೀಮತಿಕಾಳಮ್ಮ, ತಾಲೂಕು ಕಛೇರಿಯ ಸಿಬ್ಬಂಧಿ ಉಮೇಶ್, ಪೋಲಿಸ್ ಇಲಾಖೆಯ ರಾಮಲಿಂಗಪ್ಪ, ಮಡಿವಾಳ ಸಮಾಜದ ಮುಖಂಡರುಗಳು,ಸಮಾಜ ಬಂಧುಗಳು ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

### ರಾಮನ ಆದರ್ಶ ಗುಣ ಪ್ರಪಂಚದಲ್ಲೆಡೆ ಪಸರಿಸಲಿ



» **ಹೊಸದುರ್ಗ**

ಭಾರತೀಯರ ಆರಾಧ್ಯ ದೈವ ಪ್ರಭು ಶ್ರೀ ರಾಮನ ಆದರ್ಶ ಗುಣಗಳು ಪ್ರಪಂಚದ ಮೂಲೆ ಮೂಲೆಗೂ ತಲುಪಿಸುವ ಕೆಲಸವನ್ನು ನಾವು ನೀವೆಲ್ಲರೂ ಮಾಡಬೇಕಿದೆ ಎಂದು ನೊಣವಿನಕೆರೆ ಕಾಡುಸಿದ್ದೇಶ್ವರ ಮಠದ ಕರಿವೃಷಭ ದೇಶಿಕೇಂದ್ರಶ್ರೀಗಳು ತಿಳಿಸಿದರು. ಪಟ್ಟಣದ ಕಲ್ಮಠ್ ಕುಟೀರದಲ್ಲಿ ನಡೆದ ಧಾರ್ಮಿಕ ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಆಶೀರ್ವಚನ ನೀಡಿದ ಅವರು ತಂದೆ ತಾಯಿಯನ್ನ ಮಕ್ಕಳು ಪ್ರೀತಿಸುವುದು, ಗುರು ಹಿರಿಯರನ್ನ ಗೌರವಿಸುವುದು, ಮನೆಯ ಎಲ್ಲಾ ಸದಸ್ಯರು ನೆಮ್ಮದಿಯ ಬದುಕು ಕಟ್ಟಿಕೊಳ್ಳುವುದು, ಈ ಮೂಲಕ ತನ್ನನ್ನ ಸಮಾಜಮುಖಿ ಕಾರ್ಯಗಳಿಗೆ ತೊಡಗಿಸಿಕೊಳ್ಳುವುದು ಮುಂತಾದವುಗಳೇ ಪ್ರಭುಶ್ರೀ ರಾಮನ ಆದರ್ಶ ಗುಣಗಳು. ಈ ಆಚರಣೆಗಳನ್ನು ಮಾನವ ಜನ್ಮದಲ್ಲಿ ಹುಟ್ಟಿದ ನಾವುಗಳು ಜಾತಿ ಧರ್ಮಗಳ ಎಲ್ಲೆಯನ್ನ ಮೀರಿ ಭ್ರಾತೃತ್ವದ ಬದುಕನ್ನ ಕಟ್ಟಿಕೊಂಡಾಗ ನಿಜವಾಗಿಯೂ ರಾಮನ ಆದರ್ಶ ಗುಣಗಳಿಗೆ ಸಾತ್ವಿಕ ಮೌಲ್ಯ ಸಿಗುತ್ತದೆ. ರಾಮನ ಗುಣಗಳನ್ನು ಎಲ್ಲಾ ಧರ್ಮದಲ್ಲಿಯೂ ಬಂದಂತಾ ಧರ್ಮಗಳು ತಿಳಿಸಿಸಿದ್ದಾರೆ. ಮೊದಲು ನಾವು ಕಾಯಕಯೋಗಿಗಳಾಗಿ ನಮ್ಮ ಕಾಯಕದಲ್ಲಿ ಕೈಲಾಸವನ್ನು ಕಾಣಬೇಕು ಬಸವಾದಿ ಶರಣರು ಕಾಯಕವನ್ನ ನಂಬಿ ಬದುಕಿದವರು. ಇಂತಹ ಗುಣಗಳನ್ನು ಪ್ರಸ್ತುತ ದಿನಗಳಲ್ಲಿ ಶಾಲಾ ಮಕ್ಕಳಲ್ಲಿ ಕಲಿಸಬೇಕಿದೆ ಆಗ ಮಾತ್ರ ಸುಖಿ ಶ್ರೀ ರಾಮ ರಾಜ್ಯ ನಿರ್ಮಾಣವಾಗುವುದು ಎಂದರು.

# ಪರಿಸರ ಸ್ನೇಹಿ ಅಣಬೆ ಕೃಷಿ ಹೆಚ್ಚಿನ ಆದಾಯ

» **ಚಿತ್ರದುರ್ಗ**

ರೈತರು ಪ್ರಸ್ತುತ ಹವಾಮಾನ ವೈಪರಿತ್ಯದಿಂದ ಕೃಷಿಯನ್ನು ಒಂದೇ ನಂಬಿ ಆರ್ಥಿಕವಾಗಿ ಮುನ್ನೆಡೆಯಲು ಸಾಧ್ಯವಾಗದ ಹಿನ್ನಲೆಯಲ್ಲಿ ಕೃಷಿ ಉಪ ಕಸುಬುಗಳಾದ ಜೇನು ಸಾಕಾಣಿಕೆ, ಹೈನುಗಾರಿಕೆ, ಕೋಳಿ ಸಾಕಾಣಿಕೆ ಹಾಗೂ ಕುರಿ ಮತ್ತು ಮೇಕೆ ಸಾಕಾಣಿಕೆಯನ್ನು ಕೈಗೊಳ್ಳುವುದರಿಂದ ಒಂದರಲ್ಲಿ ನಷ್ಟವಾದರೆ ಇನ್ನೊಂದು ಕೃಷಿ ಪೂರಕ ಚಟುವಟಿಕೆಯಿಂದ ಲಾಭವನ್ನು ನಿರೀಕ್ಷಿಸಬಹುದು. ಇದೇ ರೀತಿ ಕಡಿಮೆ ಖರ್ಚು ಮತ್ತು ಕಡಿಮೆ ಜಾಗದಲ್ಲಿ ಹೆಚ್ಚಿನ ಆದಾಯ ಗಳಿಸಲು ಪರಿಸರ ಸ್ನೇಹಿ ಅಣಬೆ ಕೃಷಿಯನ್ನು ಕೈಗೊಳ್ಳಬಹುದು ಎಂದು ಬಬ್ಬೂರು ಫಾರಂ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ಕೃಷಿ ನಿರ್ದೇಶಕರಾದ ಆರ್. ರಜನೀಕಾಂತ ಹೇಳಿದರು.

ಹಿರಿಯೂರು ತಾಲ್ಲೂಕಿನ ಬಬ್ಬೂರುಫಾರಂನದಲ್ಲಿ ಈಚೆಗೆ ಜಿಲ್ಲೆಯ ರೈತರಿಗೆ “ಅಣಬೆ ಬೇಸಾಯ ಹಾಗೂ ಮೌಲ್ಯವರ್ಧನೆ ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.




ಅಣಬೆಕೃಷಿಯನ್ನುಸಮಗ್ರಕೃಷಿಪದ್ಧತಿಯ ಒಂದು ಅಂಗವಾಗಿಸಿಕೊಳ್ಳಬಹುದು. ವಿವಿಧ ತಿನ್ನುವ ಅಣಬೆಯ ಪ್ರಬೇದಗಳಲ್ಲಿ ಚಿಪ್ಪು ಅಣಬೆ ಅಥವಾ ಆಯ್ ಸ್ಟಾರ್ ಅಣಬೆಯನ್ನು ಅತೀ ಸುಲಭವಾಗಿ ಬೆಳೆಯಬಹುದು. ತಿನ್ನುವ ಅಣಬೆಯು ಒಂದುಉತ್ತಮತರಕಾರಿಯಾಗಿದ್ದು,ಹಲವು ವಿಟಮಿನ್‌ಗಳು ಮತ್ತು ಖನಿಜಾಂಶಗಳಿಂದ ಕೂಡಿದ್ದು ಕಬ್ಬಿಣ ಮತ್ತು ಸಕ್ಕರೆ ಅಂಶ ಕಡಿಮೆಇರುವುದರಿಂದ ಇದು ಮಧುಮೇಹಿ ಮತ್ತು ಹೃದಯ ರೋಗಗಳನ್ನು ತಡೆಗಟ್ಟುವಲ್ಲಿ ಸಹಕಾರಿಯಾಗಿದೆ. ಆದ ಪ್ರಯುಕ್ತ ಇದನ್ನು ಕೊಠಡಿಯೊಳಗೆ ಕಡಿಮೆ ಜಾಗದಲ್ಲಿ, ಕಡಿಮೆ ಅವಧಿಯಲ್ಲಿ ಮತ್ತು ಕಡಿಮೆ ಖರ್ಚಿನಲ್ಲಿ ಹವ್ಯಾಸವಾಗಿ ಅಥವಾ ವಾಣಿಜ್ಯ ಬೆಳೆಯಾಗಿ ಬೆಳೆಯಲು ರೈತರು ಈ ತರಬೇತಿಯಲ್ಲಿ ನಿಡಲಾಗುವ ಮಾಹಿತಿಯ ಸದುಪಯೋಗ ಪಡೆದುಕೊಳ್ಳಲು ಕೋರಿದರು.

ಬಬ್ಬೂರು ಫಾರಂ ತೋಟಗಾರಿಕೆ ಮಹಾವಿದ್ಯಾಲಯದ ಕೃಷಿ ಸೂಕ್ಷ್ಮಜೀವಶಾಸ್ತ್ರ ವಿಭಾಗದ ಹಿರಿಯ ತಾಂತ್ರಿಕ ಅಧಿಕಾರಿ ಕೆ.ಬಿ.ವಿದ್ಯಾವತಿ ಮಾತನಾಡಿ, ತಿನ್ನುವ ಅಣಬೆಯ ವಿವಿಧ ತಳಿಗಳ ಆಯ್ಕೆ, ಬೇಸಾಯಕ್ರಮ, ನಿರ್ವಹಣೆ ಮತ್ತು ಅವುಗಳ ಮೌಲ್ಯವರ್ಧನೆ ಬಗ್ಗೆ ಹಾಜರಿದ್ದರೈತರಿಗೆ ವಿಷಯ ಮಂಡನೆ ಮಾಡಿದರು. ನಂತರಚಿಪ್ಪುಅಣಬೆಯನ್ನು ಬೆಳೆಯು ಬಗೆಯನ್ನು ಹಾಜರಿದ್ದರೈತರಿಂದಲೇ ಪ್ರಾತ್ಯಕ್ಷಿಕೆ ಮಾಡಿಸುವ ಮೂಲಕ ರೈತರಿಗೆಅಣಬೆ ಬೆಳೆಯುವ ರೀತಿಯನ್ನು ಮನದಟ್ಟು ಮಾಡಿದರು.

ಕೃಷಿ ಅಧಿಕಾರಿಯಾದ ಪವಿತ್ರಾ ಎಂ.ಜೆ. ಮತ್ತು ಟಿ.ಪಿ ರಂಜಿತಾ ತರಬೇತಿಗೆ ರೈತರ ನೋಂದಾವಣಿ ಮಾಡಿದರು. ಜಿಲ್ಲಾ ಕೃಷಿ ತರಬೇತಿಕೇಂದ್ರದ ಸಹಾಯಕ ಕೃಷಿ ನಿರ್ದೇಶಕರು (ರೈತ ಮಹಿಳೆ) ಶ್ರೀಮತಿ ಉಷಾರಾಣಿ ಎಂ ರವರುಕಾರ್ಯಕ್ರಮದ ನಿರೂಪಣೆಯನ್ನು ಮಾಡಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಕೃಷಿ ತರಬೇತಿಕೇಂದ್ರ ಬಬ್ಬೂರಿನ ಸಿಬ್ಬಂದಿ ವರ್ಗದವರು ಹಾಗೂ ಜಿಲ್ಲೆಯ ವಿವಿಧ ಭಾಗದಿಂದ ಆಗಮಿಸಿದ 60 ರೈತ ಭಾಂದವರು ಹಾಜರಿದ್ದರು.

### ಆರೋಗ್ಯ ಕಾರ್ಯಕ್ರಮಗಳ ಕುರಿತು ಮಾಹಿತಿ ಶಿಕ್ಷಣ

## ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆ

» **ಚಿತ್ರದುರ್ಗ**

ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳು ಸಾರ್ವಜನಿಕರ ಆರೋಗ್ಯ ಕಾಪಾಡಿಕೊಳ್ಳಲು ಬಹುಮುಖ್ಯ ಯೋಜನೆಗಳಾಗಿವೆ ಎಂದು ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ್ ಹೇಳಿದರು.

ತಾಲ್ಲೂಕಿನ ಲಕ್ಷ್ಮೀಸಾಗರ ಸರ್ಕಾರಿ ಪ್ರೌಢಶಾಲೆಯಲ್ಲಿ ಗುರುವಾರ ಎನ್‌ಹೆಚ್‌ಎಂ ಅಡಿಯಲ್ಲಿ ಆಯೋಜಿಸಿದ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆ ಏರ್ಪಡಿಸುವ ಮುನ್ನ ಆರೋಗ್ಯ ಕಾರ್ಯಕ್ರಮಗಳು ಮತ್ತು ಸಾಂಕ್ರಾಮಿಕ ರೋಗಗಳು, ನೀರು ನೈರ್ಮಲ್ಯ ಕುರಿತು ಮಾಹಿತಿ ಶಿಕ್ಷಣ ಸಂವಹನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಆರೋಗ್ಯ ಕಾರ್ಯಕ್ರಮಗಳ ಮಾಹಿತಿ ಪಡೆದು ಹೆಚ್ಚಿನ ವಿಷಯ ಕಲೆಹಾಕಿ ಪ್ರಬಂಧ ಬರೆಯುವುದರ ಜೊತೆಗೆ ಸಾರ್ವಜನಿಕ ವಲಯಗಳಲ್ಲಿ ವಿದ್ಯಾರ್ಥಿ ದೆಸೆಯಿಂದಲೇ ಆರೋಗ್ಯ ಕಾರ್ಯಕ್ರಮಗಳ ಮಾಹಿತಿ ತಿಳಿದು ತಮ್ಮ ಆರೋಗ್ಯ ಕಾಪಾಡಿಕೊಳ್ಳಲು ಇದೊಂದು ಸದಾವಕಾಶ ಎಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾತನಾಡಿ, ಮನುಕುಲಕ್ಕೆ ಸಾಂಕ್ರಾಮಿಕ ರೋಗಗಳು ತುಂಬಾ ಹಾನಿ ಉಂಟುಮಾಡುತ್ತಿದ್ದು, ಕೋವಿಡ್ 19, ಹೆಚ್‌ಐವಿ, ಕ್ಷಯ, ಕುಷ್ಠ, ಮಲೇರಿಯಾ, ಡೆಂಗ್ಯೂ, ಚಿಕನ್ ಗುನ್ಯಾ, ಕಲುಷಿತ ಆಹಾರ ಮತ್ತು ಕಲುಷಿತ ನೀರಿನಿಂದ



ಹರಡುವ ರೋಗಗಳಾದ ಕರಳುಬೇನೆ, ಕಾಲರಾ, ಟೈಫಾಯಿಡ್ ಹರಡದಂತೆ ಸರ್ವರೂ ನಿಗಾವಹಿಸುವುದು ಒಳ್ಳೆಯದು. ಶುದ್ಧ ಕುಡಿಯುವ ನೀರಿನ ಬಳಕೆ ಮಾಡಿ ಪರಿಸರ ಸ್ವಚ್ಛತೆ, ವೈಯಕ್ತಿಕ ಸ್ವಚ್ಛತೆ ಕಾಪಾಡಿಕೊಂಡು ಸಾಂಕ್ರಾಮಿಕ ರೋಗಗಳಿಗೆ ಕಡಿವಾಣ ಹಾಕಬೇಕು ಎಂದರು. ಮುಖ್ಯ ಶಿಕ್ಷಕ ಹೆಚ್.ತಿಪ್ಪೇಸ್ವಾಮಿ ಮಾತನಾಡಿ, ಆರೋಗ್ಯ ಕಾರ್ಯಕ್ರಮಗಳು ಪ್ರೌಢಾವಸ್ಥೆಯ ವಿದ್ಯಾರ್ಥಿಗಳಿಗೆ ತುಂಬಾ ಉಪಯುಕ್ತವಾಗಿದ್ದು, ವಿದ್ಯಾರ್ಥಿಗಳು ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಕಾರ್ಡ್‌ಗಳನ್ನು ಪ್ರತಿಯೊಬ್ಬರು ಮಾಡಿಸಿಕೊಂಡು ಪೋಷಕರಿಗೂ ಮಾಹಿತಿ ತಿಳಿಸಿ, ತುರ್ತು ಸಂದರ್ಭಗಳಲ್ಲಿ ಸರ್ಕಾರಿ ಆರೋಗ್ಯ ಸೇವೆಗಳನ್ನು ಪಡೆಯುವುದರ ಮುಖಾಂತರ ಆರೋಗ್ಯವಂತ ರಾಷ್ಟ್ರಕಟ್ಟಲು ಪಣತೊಡಬೇಕು ಎಂದರು. ಆರೋಗ್ಯ ನಿರೀಕ್ಷಣಾಧಿಕಾರಿ ಚಂದ್ರಶೇಖರ್, ಸಹಶಿಕ್ಷಕರಾದ ರೋಷನ್, ಪ್ರತಿಭಾ, ರವಿಕುಮಾರ್, ಮದನ್ ಕುಮಾರ್, ಗುರುಮೂರ್ತಿ, ಸುಮಾ, ಆಶಾ ಕಾರ್ಯಕರ್ತೆ ಮಮತಾ ಹಾಗೂ ವಿದ್ಯಾರ್ಥಿಗಳು ಇದ್ದರು.

## ತುರುವನೂರಿನಲ್ಲಿ ಗೋಶಾಲೆ ಉದ್ಘಾಟನೆ

### ಸರ್ಕಾರದ ಗ್ಯಾರಂಟಿ ಯೋಜನೆಗಳು ಜನಪರವಾಗಿವೆ- ಟಿ. ರಘುಮೂರ್ತಿ



» **ಚಿತ್ರದುರ್ಗ**

ನಮ್ಮ ಸರ್ಕಾರ ಚುನಾವಣೆಗೂ ಮುನ್ನ ನೀಡಿದ ಭರವಸೆಯಂತೆ ಎಲ್ಲ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದ್ದು, ಇವೆಲ್ಲವೂ ಜನಪರವಾದ ಯೋಜನೆಗಳಾಗಿವೆ ಎಂದು ಚಳ್ಳಕೆರೆ ಶಾಸಕ ಟಿ. ರಘುಮೂರ್ತಿ ಹೇಳಿದರು.ತಾಲ್ಲೂಕು ಆಡಳಿತ ಹಾಗೂ ತಾಲ್ಲೂಕು ಪಂಚಾಯತ್, ತಾಲ್ಲೂಕು ಮಟ್ಟದ ಗ್ಯಾರೆಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸಹಯೋಗದೊಂದಿಗೆ ಚಿತ್ರದುರ್ಗ ತಾಲ್ಲೂಕಿನ ತುರುವನೂರು ಹೋಬಳಿಯ ತುರುವನೂರು ಗ್ರಾಮದಲ್ಲಿ ನಡೆದ ಹೋಬಳಿ ಮಟ್ಟದ ಗ್ಯಾರೆಂಟಿ ಯೋಜನೆಗಳ ಸಮಾವೇಶದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಚುನಾವಣಾ ಪೂರ್ವದಲ್ಲಿ ನೀಡಿದ ಭರವಸೆಯಂತೆ ನಾವು ಶಕ್ತಿ, ಅನ್ನಭಾಗ್ಯ, ಗೃಹಜ್ಯೋತಿ, ಗೃಹಲಕ್ಷ್ಮಿ ಹಾಗೂ ಯುವನಿಧಿ ಹೀಗೆ 05 ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿ, ಜನರಿಗೆ ತಲುಪಿಸಿದ್ದೇವೆ. ಪ್ರಸ್ತುತ ಬರ ಪರಿಸ್ಥಿತಿ ಇರುವುದರಿಂದ ಜಾನುವಾರುಗಳನ್ನು ರಕ್ಷಿಸಲು ನಮ್ಮ ಸರ್ಕಾರ ಬದ್ಧವಾಗಿದ್ದು, ಈ ನಿಟ್ಟಿನಲ್ಲಿ ಇಂದು ಗೋಶಾಲೆಯನ್ನು ಪ್ರಾರಂಭಿಸಿದ್ದೇವೆ ಎಂದರು. ಈ ಸಂದರ್ಭದಲ್ಲಿ ಚಿತ್ರದುರ್ಗ ತಹಸಿಲ್ದಾರ್ ಡಾ. ನಾಗವೇಣಿ, ತಾಲ್ಲೂಕು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಧಿಕಾರಿ ಸುಧಾ, ಗ್ರಾಮ ಪಂಚಾಯಿತಿ ಅಧ್ಯಕ್ಷೆ ದೀಪಾ ಮಹೇಶ್, ಉಪಾಧ್ಯಕ್ಷ ತಿಪ್ಪೇಸ್ವಾಮಿ, ಸದಸ್ಯರುಗಳು, ಮುಖಂಡರುಗಳಾದ ಸಂತೋಷ, ಕಾಕಿ ಹನುಮಂತರೆಡ್ಡಿ, ವೀವೇಕಪ್ಪ, ನಾಗರಾಜ್, ಪವನ್ ಕುಮಾರ್, ಡಿ.ಆರ್. ಮಂಜುನಾಥ್, ಮುಖಂಡರು, ಸಾರ್ವಜನಿಕರು ಸೇರಿದಂತೆ ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

### ಡಾ.ಹೆಚ್.ಸಿ.ಮಹದೇವಪ್ಪ ಪ್ರವಾಸ

ದಾವಣಗೆರೆ: ಸಮಾಜ ಕಲ್ಯಾಣ ಸಚಿವರಾದ ಡಾ.ಹೆಚ್.ಸಿ.ಮಹದೇವಪ್ಪ ಅವರು ಫೆಬ್ರವರಿ 3 ರಂದು ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ. ಬೆಳಗ್ಗೆ 10.30 ಕ್ಕೆ ದಾವಣಗೆರೆಗೆ ಆಗಮಿಸುವರು. ನಂತರ ನಗರದ ಶಾಮನೂರು ಶಿವಶಂಕರಪ್ಪ ಪಾರ್ವತಮ್ಮ ಕಲ್ಯಾಣ ಮಂಟಪದಲ್ಲಿ ನಡೆಯುವ 38 ನೇ ರಾಜ್ಯಮಟ್ಟದ ಪತ್ರಕರ್ತರ ಸಮ್ಮೇಳನದಲ್ಲಿ ಮಾನ್ಯ ಮುಖ್ಯಮಂತ್ರಿಯವರೊಂದಿಗೆ ಭಾಗವಹಿಸುವರು.

## ಸರ್ಕಾರದ 5 ಗ್ಯಾರಂಟಿ ಯೋಜನೆ ಅನುಷ್ಠಾನದ ಲೋಪದೋಷ ಬಗ್ಗೆ ಸಾರ್ವಜನಿಕವಾಗಿ ಮುಕ್ತ ಚರ್ಚೆ: ತಹಶೀಲ್ದಾರ್ ರೇಹಾನ್‌ಪಾಷ

» **ಚಳ್ಳಕೆರೆ**

ರಾಜ್ಯ ಸರ್ಕಾರ ಕಳೆದ ವರ್ಷದ ವಿಧಾನಸಭಾ ಚುನಾವಣೆಯಲ್ಲಿ ಜನತೆಗೆ ನೀಡಿದ ಭರವಸೆಯಂತೆ ಕಾಂಗ್ರೆಸ್ ನೇತೃತ್ವದ ಸರ್ಕಾರ ಮುಖ್ಯಮಂತ್ರಿ ಎಸ್.ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಐದು ಪ್ರಮುಖ ಗ್ಯಾರಂಟಿಗಳನ್ನು ಜಾರಿಮಾಡಿದ್ದು ಅವುಗಳ ಅನುಷ್ಠಾನದ ಲೋಪದೋಷ ಕುರಿತು ಸಾರ್ವಜನಿಕರೊಂದಿಗೆ ಚರ್ಚಿಸಲು ಸಭೆಯನ್ನು ಏರ್ಪಡಿಸಿದೆ ಎಂದು ತಹಶೀಲ್ದಾರ್ ರೇಹಾನ್‌ಪಾಷ ತಿಳಿಸಿದ್ದಾರೆ.

ಅವರು, ಈ ಬಗ್ಗೆ ಮಾಹಿತಿ ನೀಡಿ, ಫೆ. 3ರ ಶನಿವಾರ ಬೆಳಗ್ಗೆ 10ಕ್ಕೆ ಪಾವಗಡ ರಸ್ತೆಯ ಶ್ರೀಗುರುರಾಘವೇಂದ್ರ ಕಲ್ಯಾಣ ಮಂಟಪದಲ್ಲಿ ಸಭೆನಡೆಯಲಿದ್ದು, ಸಾರ್ವಜನಿಕರು, ವಿವಿಧ ಸಂಘ ಸಂಸ್ಥೆಗಳ ಪ್ರತಿನಿಧಿಗಳು, ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಯೋಜನೆಗಳ ಸಾಧಕಬಾಧಕಗಳ ಬಗ್ಗೆ ಮಾಹಿತಿ ನೀಡುವಂತೆ ಮನವಿ ಮಾಡಿದ್ದಾರೆ. ಗೃಹಲಕ್ಷ್ಮಿ, ಅನ್ನಭಾಗ್ಯ, ಗೃಹಜ್ಯೋತಿ, ಶಕ್ತಿಯೋಜನೆ, ಯುವನಿಧಿ ಯೋಜನೆಗಳನ್ನು ಈಗಾಗಲೇ ಜಾರಿ ಮಾಡಲಾಗಿದೆ. ಕಳೆದ ವಾರವಷ್ಟೇ ಮುಖ್ಯಮಂತ್ರಿಗಳು ಯುವನಿಧಿ ಯೋಜನೆಗೆ ಚಾಲನೆ ನೀಡಿದ್ದಾರೆ ಆದರೆ ಎಲ್ಲಾ ಯೋಜನೆಗಳು ಫಲಾನುಭವಿಗಳನ್ನು ನೇರವಾಗಿ ತಲುಪುತ್ತಿರುವ ಬಗ್ಗೆ ಮಾಹಿತಿ ಪಡೆದು ಲೋಪವಿದ್ದಲ್ಲಿ ಸರಿಪಡಿಸುವ ನಿಟ್ಟಿನಲ್ಲಿ ಈ ಸಭೆಯನ್ನು ಹಮ್ಮಿಕೊಂಡಿದೆ ಎಂದು ತಿಳಿಸಿದ್ದಾರೆ. ಫೆ.2ರಂದು ತಳುಕಿನ ಶಾದಿಮಹಲ್, ನಾಯಕನಹಟ್ಟಿಯ ಗುರುತಿಪ್ಪೇರುದ್ರಸ್ವಾಮಿ ಒಳಮಠ, ಚಳ್ಳಕೆರೆ ಕಸಬಾ ವ್ಯಾಪ್ತಿಯಲ್ಲಿ ಫೆ.3, ಪರಶುರಾಮಪುರ ಫೆ.5ರಂದು ಪಬ್ಲಿಕ್ ಶಾಲಾ ಮೈದಾನದಲ್ಲಿ ನಡೆಯಲಿದೆ. ಸಾರ್ವಜನಿಕರು ಸಭೆಯಲ್ಲಿ ಪಾಲ್ಗೊಂಡು ಯೋಜನೆಗಳ ಅನುಷ್ಠಾನದಲ್ಲಿ ಆಗಿರುವ ಲೋಪದೋಷಗಳ ಬಗ್ಗೆ ಮಾಹಿತಿ ನೀಡಲು ಮನವಿ ಮಾಡಲಾಗಿದೆ.

**ಪ್ರಮುಖ ಸುದ್ದಿ**

# ಇನ್ಸ್ ಫಾಯರ್ಡ್ ಟು ಇನ್ಸ್ ಪೈರ್ ಪರೀಕ್ಷೆ ಫಲಿತಾಂಶ ಬಿಡುಗಡೆ; ಪ್ರಾಂಶುಪಾಲ ಕೆ.ರಂಗಪ್ಪರಿಂದ ಪ್ರಕಟಣೆ

» **ಹಿರಿಯೂರು**

ನಗರದ ಡಾ.ಬಿ.ಆರ್. ಅಂಬೇಡ್ಕರ್ ಪದವಿ ಪೂರ್ವ ಕಾಲೇಜು ಕಂಪ್ಯೂಟರ್ ಸೈನ್ಸ್ ಹಾಗೂ ವಾಣಿಜ್ಯ ವಿಭಾಗದ ವತಿಯಿಂದ ತಾಲೂಕಿನ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಆಯೋಜಿಸಲಾಗಿದ್ದ ಇನ್ಸ್ ಫಾಯರ್ಡ್ ಟು ಇನ್ಸ್ ಪೈರ್ ಪರೀಕ್ಷೆಯ ಫಲಿತಾಂಶ ಬಿಡುಗಡೆ ಆಗಿದೆ ಎಂಬುದಾಗಿ ಕಾಲೇಜು ಪ್ರಾಂಶುಪಾಲ ಕೆ.ರಂಗಪ್ಪ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಗರದ ವಾಣಿ ವಿಲಾಸ ವಿದ್ಯಾಸಂಸ್ಥೆಯ ಎ.ಬಿಪುಲ್, ಮತ್ತು ಬುರುಜನರೊಪ್ಪ ಶ್ರೀಶಾರಾದದೇವಿ ಪ್ರೌಢಶಾಲೆ ಡಿ.ಅಮೃತ ಪ್ರಥಮ ಸ್ಥಾನ ಗಳಿಸಿದ್ದರೆ, ಮೋಕ್ಷಗುಂಡಂ ಶಾಲೆಯ ಎಸ್.ಎಲ್.ಹರ್ಷಿತ ಮತ್ತು ಯಲ್ಲದಕೆರೆ ಶ್ರೀಜ್ಞಾನಜ್ಯೋತಿ



ಪ್ರೌಢಶಾಲೆಯ ಎಸ್.ಯೋಗೇಶ್ ದ್ವಿತೀಯ ಸ್ಥಾನ, ಹಾಗೂ ವಾಗ್ದೇವಿ ಪ್ರೌಢಶಾಲೆಯ ಆರ್.ಎಸ್.ಧನುಶ್ರೀ ಮತ್ತು ವೇದಾವತಿ ಪ್ರೌಢಶಾಲೆಯ ಪಿ.ವರಲಕ್ಷ್ಮೀ ತೃತೀಯ ಸ್ಥಾನ ಗಳಿಸಿದ್ದಾರೆ.

ನಗರದ ಅಸಂಷನ್ ಶಾಲೆಯ ಕೆ.ಮಾನಸಮರಡಿಹಳ್ಳಿ, ಕೆಪಿಎಸ್ ಶಾಲೆಯ ಆರ್.ಮೇಘನಾ ವಿವಿಪುರ, ಬಿ.ಎಲ್.ಗೌಡ ಶಾಲೆಯ ಎಂ.ಧೀರಜ್ ವಿಕೆಗುಡ್ಡ, ಸರಕಾರಿ ಪ್ರೌಢಶಾಲೆ ಕೆ.ಮಾನ್ಯ, ಎಸ್.ಜೆ.ಆರ್ ಶಾಲೆ ಎಸ್.ಗೀತಾ, ಹೂವಿನಹೊಳೆ ಎಂ.ಜೆ. ಆರ್ ಶಾಲೆ ವಿಶ್ರೇಯಾ, ಬೇತೂರುಪಾಳ್ಯ ಸರಕಾರಿ ಪ್ರೌಢಶಾಲೆ ಪ್ರಿಯ, ಗೌಡನಹಳ್ಳಿ-ರಂಗಾಪುರ ಸರಕಾರಿ ಪ್ರೌಢಶಾಲೆಯ ಎಸ್.ಶ್ವೇತ, ದಿಂಡಾವರ ಸರಕಾರಿ ಪ್ರೌಢಶಾಲೆ ಎಸ್.ಜಗದೀಶ, ಕೆ.ಆರ್.ಹಳ್ಳಿ ಬಸವೇಶ್ವರ ವಸತಿ ಪ್ರೌಢಶಾಲೆ ಡಯಾನ ಸಮಾಧಾನಕರ ಬಹುಮಾನ ಗಳಿಸಿದ್ದಾರೆ. ಆಯ್ಕೆಯಾದ ವಿದ್ಯಾರ್ಥಿಗಳಿಗೆ ಫೆಬ್ರವರಿ 2ರಂದು ಕಾಲೇಜಿನಲ್ಲಿ ನಡೆಯುವ ಪ್ರಶಸ್ತಿ ಪ್ರಧಾನ ಹಾಗೂ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೆ.ರವಿಶಂಕರರೆಡ್ಡಿ ಪ್ರಶಸ್ತಿಗಳನ್ನು ಪ್ರಧಾನ ಮಾಡಲಿದ್ದಾರೆ.

ಈ ಕಾರ್ಯಕ್ರಮವನ್ನು ತಾಲ್ಲೂಕು ತಹಸೀಲ್ದಾರ್ ಸಿ.ರಾಜೇಶ್ ಕುಮಾರ್ ಉದ್ಘಾಟಿಸಲಿದ್ದು, ಪಿಯುಸಿಯಲ್ಲಿ ಅತ್ಯುನ್ನತ ಶ್ರೇಣಿ ಪಡೆದ ವಿದ್ಯಾರ್ಥಿಗಳಿಗೆ ಉಪನಿರ್ದೇಶಕ ಆರ್.ಪುಟ್ಟಸ್ವಾಮಿ ಸನ್ಮಾನಿಸಲಿದ್ದು, ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ತಿಪ್ಪೇಸ್ವಾಮಿ ಬಹುಮಾನ ವಿತರಣೆ ಮಾಡಲಿದ್ದಾರೆ.

ಕಾರ್ಯಕ್ರಮದಲ್ಲಿ ಡಿವೈಎಸ್.ಪಿ ಚೈತ್ರಾ, ಪೌರಾಯುಕ್ತ ಎಚ್.ಮಹಂತೇಶ್, ಪ್ರಾಂಶುಪಾಲ ಡಾ.ಆರ್.ಮಹೇಶ್, ವೇದಾಪತ್ತಿನ ಸಹಕಾರ ಸಂಘದ ಅಧ್ಯಕ್ಷ ಎಂ.ಎಸ್.ರಾಘವೇಂದ್ರ, ಕಾಲೇಜು ಮುಖ್ಯಸ್ಥ ಬಿ.ಪಿ.ತಿಪೇಸ್ವಾಮಿ, ಮುಖ್ಯಶಿಕ್ಷಕಿ ಎಂ.ದೀಪಾ ಇತರರು ಭಾಗವಹಿಸಲಿದ್ದಾರೆ ಎಂಬುದಾಗಿ ಅವರು ತಿಳಿಸಿದ್ದಾರೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T